ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 96

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 22–03–2026

## ಜೊಮಾಟೋ ಪ್ಲಾಟ್ ಫಾರ್ಮ್ ಶುಲ್ಕ ಏರಿಕೆ




**ಬೆಂಗಳೂರು, ಮಾ.21–** ಗಲ್ಫ್ ರಾಷ್ಟ್ರಗಳಲ್ಲಿ ಉಂಟಾಗಿರುವ ಯುದ್ಧ ಭೀತಿಯ ಪರಿಣಾಮ ಜಾಗತಿಕ ಸರಬರಾಜು ಸರಪಳಿಗೆ ಹೊಡೆತ ನೀಡುತ್ತಿದ್ದು, ಅದರ ಬಿಸಿ ಈಗ ಬೆಂಗಳೂರು ನಗರಕ್ಕೂ ತಟ್ಟಲು ಆರಂಭಿಸಿದೆ. ವಿಶೇಷವಾಗಿ ಆಹಾರ ಡೆಲಿವರಿ ಸೇವೆಗಳ ಮೇಲೆ ಪರಿಣಾಮ ಸ್ಪಷ್ಟವಾಗುತ್ತಿದೆ.Geographic Reference

ಈ ನಡುವೆ ಜೊಮಾಟೋ ತನ್ನ ಪ್ಲಾಟ್‌ಫಾರ್ಮ್ ಶುಲ್ಕವನ್ನು ಮತ್ತೆ ಹೆಚ್ಚಿಸಿರುವುದು ಗ್ರಾಹಕರಿಗೆ ಮತ್ತೊಂದು ಹೊರೆ ಯಾಗಿದೆ. ಗಲ್ಫ್ ರಾಷ್ಟ್ರಗಳಲ್ಲಿನ ಅಶಾಂತಿ ಪರಿಸ್ಥಿತಿ ಜಾಗತಿಕ ಇಂಧನ ಹಾಗೂ ಲಾಜಿಸ್ಟಿಕ್ಸ್ ಕ್ಷೇತ್ರದಲ್ಲಿ ಅಸ್ಥಿರತೆ ಉಂಟುಮಾಡಿದ್ದು, ಇದರ ಪರಿಣಾಮವಾಗಿ ಬೆಂಗಳೂರು ಸೇರಿದಂತೆ ಮಹಾನಗರಗಳಲ್ಲಿ ಆನ್‌ಲೈನ್ ಆಹಾರ ಡೆಲಿವರಿ ಸೇವೆಗಳು ಬೆಲೆ ಏರಿಕೆಯನ್ನು ಕಂಡಿವೆ.ಈ ನಡುವೆ ಜೊಮಾಟೋ ತನ್ನ ಪ್ಲಾಟ್‌ಫಾರ್ಮ್ ಶುಲ್ಕವನ್ನು ಶೇ. 19ರಷ್ಟು ಏರಿಸಿದೆ. ಒಂದು ವರ್ಷದೊಳಗೆ ಇದೇ ಎರಡನೇ ಬಾರಿ ಪ್ಲಾಟ್‌ಫಾರ್ಮ್ ಶುಲ್ಕ ಹೆಚ್ಚಳ ಮಾಡಲಾಗಿದೆ. ಈ ಹಿಂದೆ ಇದ್ದ 12.50 ಇದ್ದ ಪ್ಲಾಟ್‌ಫಾರ್ಮ್ ಶುಲ್ಕವನ್ನು 14.90 ರೂ.ಗಳಿಗೆ ಏರಿಸಲಾಗಿದ್ದು, ಪ್ರತಿ ಆರ್ಡರ್‌ಗೂ ಈ ಶುಲ್ಕ ಅನ್ವಯವಾಗುತ್ತದೆ.ಅಂದರೆ, ಪ್ರತೀ ಆರ್ಡರ್‌ಗೆ 2.40 ಹೆಚ್ಚುವರಿ ಶುಲ್ಕ ಗ್ರಾಹಕರ ಮೇಲೆ ಬೀಳಲಿದೆ.ಈ ಹೆಚ್ಚಳದಿಂದ ಈಗಾಗಲೇ ದುಬಾರಿಯಾಗಿರುವ ಆನ್‌ಲೈನ್ ಆಹಾರ ಸೇವೆಗಳು ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ.ಇಂಧನ ಬೆಲೆ, ಡೆಲಿವರಿ ವೆಚ್ಚ, ಮತ್ತು ಸರಬರಾಜು ಸಮಸ್ಯೆಗಳು ಗ್ರಾಹಕರಿಗೆ ನೇರ ಹೊರೆ ಆಗುತ್ತಿದೆ.ಇದರ ಜೊತೆಗೆ, ಡೆಲಿವರಿ ಪಾಲುದಾರರಿಗೂ ಆರ್ಡರ್‌ಗಳ ಪ್ರಮಾಣದಲ್ಲಿ ಸ್ವಲ್ಪ ಕುಸಿತ ಕಾಣಿಸಿಕೊಳ್ಳುತ್ತಿರುವ ವರದಿಗಳು ಬರುತ್ತಿವೆ.ಜಾಗತಿಕ ಅಶಾಂತಿಯ ಪರಿಣಾಮ ಸ್ಥಳೀಯ ಜೀವನ ಶೈಲಿಯ ಮೇಲೂ ಪರಿಣಾಮ ಬೀರುತ್ತಿದೆ ಎಂಬುದಕ್ಕೆ ಇದು ಮತ್ತೊಂದು ಉದಾಹರಣೆಯಾಗಿದೆ.

## ಯಾವುದೇ ಧರ್ಮ ದ್ವೇಷ ಮಾಡುವಂತೆ ಹೇಳಲ್ಲ: ಸಿಎಂ

**ಬೆಂಗಳೂರು ಮಾ. 21: ನಗರದ ಕಂಟೋನ್ಮೆಂಟ್ ರೈಲ್ವೆ ನಿಲ್ದಾಣ ಹಿಂಭಾಗ ಬೆನ್ಸನ್ ಟೌನ್‌ನ ಮಸ್ಜಿದ್ ಇ– ಖಾದ್ರಿಯಾದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಇಂದು ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಶಾಸಕ ರಿಜ್ವಾನ್ ಅರ್ಷದ್ ಮತ್ತು ಮುಸ್ಲೀಂ ಮುಖಂಡರು ಪುಷ್ಪಗುಚ್ಛ ನೀಡಿ ಸ್ವಾಗತಿಸಿದರು.**

ಯಾವುದೇ ಧರ್ಮ ದ್ವೇಷ ಮಾಡುವಂತೆ ಹೇಳಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.
ರಾಜ್ಯದ ಮುಸ್ಲಿಂ ಬಾಂಧವರಿಗೆ ರಂಜಾನ್ ಹಬ್ಬದ ಶುಭಕೋರಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾನವಕುಲದ ಒಳಿತಿಗೆ ಪ್ರಾರ್ಥಿಸುವುದು ಅತ್ಯಂತ ಅವಶ್ಯ ಎಂದು ತಿಳಿಸಿದರು.



ಅವರು ಇಂದು ಪವಿತ್ರ ರಂಜಾನ್ ಹಬ್ಬದ ಪ್ರಯುಕ್ತ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿ ಮಾತನಾಡಿದರು
ಮಾನವೀಯತೆಯಿಂದ ಪರಸ್ಪರ ಪ್ರೀತಿ ವಿಶ್ವಾಸದಿಂದ ಬಾಳುವುದು ಅವಶ್ಯ. ಭಾರತ ದೇಶ ವಿವಿಧ ಜಾತಿ ಸಂಸ್ಕೃತಿಗಳಿಂದ ಕೂಡಿದೆ. ವಿವಿಧತೆಯಲ್ಲಿ ಏಕತೆಯಿರುವ ನಮ್ಮ ದೇಶದಲ್ಲಿ ಎಲ್ಲರೂ ಒಟ್ಟಾಗಿ ಬಾಳಬೇಕು. ಯಾವುದೇ ಧರ್ಮವೂ ದ್ವೇಷವನ್ನು ಬೋಧಿಸುವುದಿಲ್ಲ. ಎಲ್ಲ ಧರ್ಮಗಳೂ ಪ್ರೀತಿಯನ್ನು ಬೋಧಿಸುತ್ತವೆ ಎಂದರು.
ನಾವು ಪ್ರಾರ್ಥನೆ ಮಾಡುವುದು ದೇವರು ಹಾಗೂ ಮನುಕುಲಕ್ಕೆ. ನಾವೆಲ್ಲ ಮಾನವರಾಗಿ ಕೆಲಸ ಮಾಡಬೇಕು ಇದು ಬಹಳ ಅವಶ್ಯಕ. ಬದುಕಿನ ಸಾರ್ಥಕಕ್ಕೆ ಮಾನವೀಯತೆ ಮತ್ತು ವಿಶ್ವಾಸದಿಂದ ಇರಬೇಕು. ನಮ್ಮ ದೇಶ ಅನೇಕ ಜಾತಿ ಧರ್ಮ ಮತ್ತು ಸಂಸ್ಕೃತಿಗಳಿಂದ ಕೂಡಿದೆ.

ಯಾವುದೇ ಜಾತಿ ಧರ್ಮ ಇದ್ದರೂ ಕೂಡ ನಾವೆಲ್ಲ ಒಟ್ಟಾಗಿ ಬಾಳಬೇಕು. ಯಾವುದೇ ಧರ್ಮ ದ್ವೇಷ ಬೋಧನೆ ಮಾಡಬಾರದು. ಇಸ್ಲಾಂ, ಕ್ರೈಸ್ತ, ಹಿಂದೂ ಧರ್ಮಗಳು ಪ್ರೀತಿಯನ್ನೇ ತೋರಿಸುತ್ತವೆ. ಯಾವುದೇ ಧರ್ಮ ದ್ವೇಷ ಮಾಡುವಂತೆ ಹೇಳಲ್ಲ ಎಂದರು

## ಭಾವೈಕ್ಯತೆಯ ಸಂಕೇತವಾಗಿ ಸಂಭ್ರಮದ 'ಈದ್–ಉಲ್–ಫಿತರ್' ಆಚರಣೆ

ಧೈರ್ಯದ ದಾರಿ

**ಸಿರವಾರ:** ಪಟ್ಟಣದ ಐತಿಹಾಸಿಕ ಈದ್ಗಾ ಮೈದಾನದಲ್ಲಿ ಇಂದು ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿ ಹಾಗೂ ಸಡಗರದಿಂದ 'ಈದ್–ಉಲ್–ಫಿತರ್' ಹಬ್ಬವನ್ನು ಆಚರಿಸಿದರು. ಒಂದು ತಿಂಗಳ ಕಾಲ ಕಠಿಣ ಉಪವಾಸ ವ್ರತ (ರೋಜಾ) ಪೂರೈಸಿದ ಮುಸ್ಲಿಂ ಬಾಂಧವರು, ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು.
ಸಾಮೂಹಿಕ ಪ್ರಾರ್ಥನೆ ಮತ್ತು ಶಾಂತಿ ಸಂದೇಶ
ಬೆಳಿಗ್ಗೆಯಿಂದಲೇ ಹೊಸ ಬಟ್ಟೆ ಧರಿಸಿ ಸಂಭ್ರಮದಿಂದ ಮೈದಾನಕ್ಕೆ ಆಗಮಿಸಿದ ನೂರಾರು ಭಕ್ತಾದಿಗಳು, ಧರ್ಮಗುರುಗಳ ನೇತೃತ್ವದಲ್ಲಿ ವಿಶೇಷ ಈದ್ ನಮಾಜ್ ನೆರವೇರಿಸಿದರು. ಪ್ರಾರ್ಥನೆಯ ನಂತರ ಮಾತನಾಡಿದ ಧರ್ಮಗುರುಗಳು, "ರಂಜಾನ್ ಹಬ್ಬವು ತ್ಯಾಗ, ಶಾಂತಿ ಮತ್ತು ಸಮಾನತೆಯ ಸಂಕೇತವಾಗಿದೆ. ಎಲ್ಲರೂ ಸೌಹಾರ್ದತೆಯಿಂದ ಬಾಳಬೇಕು" ಎಂದು ಶಾಂತಿ ಸಂದೇಶ ನೀಡಿದರು.





**ಸೌಹಾರ್ದತೆಯ ಮೇಳೈಕೆ:**
ಸಿರವಾರದ ಈ ಹಬ್ಬದ ಆಚರಣೆಯಲ್ಲಿ ಕೇವಲ ಮುಸ್ಲಿಂ ಬಾಂಧವರಷ್ಟೇ ಅಲ್ಲದೆ, ವಿವಿಧ ಧರ್ಮಗಳ ಮುಖಂಡರು ಮತ್ತು ಸ್ಥಳೀಯ ಜನಪ್ರತಿನಿಧಿಗಳು ಈದ್ಗಾ ಮೈದಾನಕ್ಕೆ ಭೇಟಿ ನೀಡಿ ಶುಭ ಕೋರಿದರು. ಪರಸ್ಪರ ಅಪ್ಪಿಕೊಳ್ಳುವ ಮೂಲಕ "ಈದ್ ಮುಬಾರಕ್" ಎಂದು ಹಾರೈಸಿದ್ದು ಭಾವೈಕ್ಯತೆಯ ಸಾರವನ್ನು ಎತ್ತಿ ಹಿಡಿಯಿತು.

**ಸುಗಮ ವ್ಯವಸ್ಥೆ:** ಹಬ್ಬದ ಪ್ರಯುಕ್ತ ಸಿರವಾರ ಪೋಲಿಸ್ ಇಲಾಖೆ ಯಿಂದ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು. ಪಟ್ಟಣ ಪಂಚಾಯಿತಿ ವತಿಯಿಂದ ಈದ್ಗಾ ಮೈದಾನದ ಸುತ್ತಮುತ್ತ ಸ್ವಚ್ಛತೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿತ್ತು. "ಈ ಹಬ್ಬ ನಮ್ಮೆಲ್ಲರ ನಡುವೆ ಪ್ರೀತಿ ಮತ್ತು ಸೌಹಾರ್ದತೆಯನ್ನು ಮತ್ತಷ್ಟು ಗಟ್ಟಿಗೊಳಿಸಲಿ." ಸ್ಥಳೀಯ ನಿವಾಸಿಯಾದ ಎಂ. ಡಿ ಹುಸೇನ್ ಬಡೆಘರ್ ಹೇಳಿದರು

**ರಂಜಾನ್ ಹಬ್ಬದ ಅಂಗವಾಗಿ ಮುಸ್ಲಿಂ ಸಮುದಾಯಕ್ಕೆ ಶುಭಾಶಯ: ಈದ್ಗಾ ಮೈದಾನದಲ್ಲಿ ಸೌಹಾರ್ದ ಸಂದೇಶ**

## ಸಮಾಜದಲ್ಲಿ ಶಾಂತಿ, ಏಕತೆ ಕಾಪಾಡೋಣ: ರಾಜಾ ವೆಂಕಟಪ್ಪ ನಾಯಕ



ಧೈರ್ಯದ ದಾರಿ

**ಮಾನ್ವಿ :** ಪಟ್ಟಣದ ಈದ್ಗಾ ಮೈದಾನದ ಹತ್ತಿರ ರಂಜಾನ್ ಹಬ್ಬದ ಅಂಗವಾಗಿ ಮುಸ್ಲಿಂ ಸಮುದಾಯದವರಿಗೆ ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಶುಭಾಶಯಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಂಜಾನ್ ಹಬ್ಬವು ಶಾಂತಿ, ಸಹಾನುಭೂತಿ ಮತ್ತು ಸೌಹಾರ್ದತೆಯ ಪ್ರತೀಕವಾಗಿದ್ದು, ಸಮಾಜದಲ್ಲಿ ಎಲ್ಲರೂ ಒಂದಾಗಿ ಬಾಳಬೇಕೆಂಬ ಸಂದೇಶ ನೀಡುತ್ತದೆ ಎಂದು ಹೇಳಿದರು.
ಇನ್ನೂ ಅವರು, ಧರ್ಮಭಾವನೆಗಳನ್ನು ಗೌರವಿಸಿ ಪರಸ್ಪರ ಸಹಕಾರದಿಂದ ಸಮಾಜದಲ್ಲಿ ಶಾಂತಿ ಮತ್ತು ಏಕತೆ ಕಾಪಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ರಾಜ್ಯ ಯುವ ಘಟಕದ ಉಪಾಧ್ಯಕ್ಷ ರಾಜಾ ರಾಮಚಂದ್ರನಾಯಕ, ತಾ. ಅಧ್ಯಕ್ಷ ಡಾ. ಈರಣ್ಣ ಮರ್ಲಟ್ಟಿ, ಹೆಚ್. ಮೌನೇಶ ಗೌಡ, ಶರಣಪ್ಪ ಗೌಡ, ಬಾಷ ಸಾಬ್, ಖಲೀಲ್ ಖುರೇಷಿ, ಶರಣಪ್ಪ ಮೇದಾ, ಸುಭಾನ್ ಬೇಗ್, ಸಾಜಿದ್ ಪಾಷಾ, ಮೌಲಸಾಬ್, ಬಸವರಾಜ ಸ್ವಾಮಿ, ವಿಜಯ ನಾಯಕ ಕೊಟ್ನೆಕಲ್ ಸೇರಿದಂತೆ ಇನ್ನಿತರರು ಇದ್ದರು.

## ಪಟ್ಟಣದಲ್ಲಿ ಮುಸ್ಲಿಂ ಸಮುದಾಯದಿಂದ ರಂಜಾನ್ ಆಚರಣೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಈದ್ಗಾ ಮೈದಾನದ ಹತ್ತಿರ ರಂಜಾನ್ ಹಬ್ಬದ ಅಂಗವಾಗಿ ಮುಸ್ಲಿಂ ಸಮುದಾಯದವರಿಗೆ ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಶುಭಕೋರಿದರು.ಜೆಡಿಎಸ್ ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ತಾ.ಅಧ್ಯಕ್ಷರಾದ ಡಾ.ಈರಣ್ಣ ಮರ್ಲಟ್ಟಿ, ಹೆಚ್.ಮೌನೇಶಗೌಡ, ಶರಣಪ್ಪಗೌಡ,ಬಾಷಸಾಬ್, ಖಲೀದ್ ಖುರೇಷಿ,ಶರಣಪ್ಪ ಮೇದಾ,ಸುಭಾನ್ ಬೇಗ್,ಸಾಜಿದ್ ಪಾಷಾ,ಮೌಲಸಾಬ್, ಬಸವರಾಜ ಸ್ವಾಮಿ ಸೇರಿದಂತೆ ಇನ್ನಿತರರು ಇದ್ದರು

## ಏಕತೆಯ ಹಬ್ಬಗಳು: ರಂಜಾನ್–ಯುಗಾದಿ ಸಂಭ್ರಮದಲ್ಲಿ ಜಮಖಂಡಿ ಮಾದರಿ : ಮಾಜಿ ಶಾಸಕ ಆನಂದ ನ್ಯಾಮಗೌಡ




**ಜಮಖಂಡಿ: ಮಾ.21:**ರಂಜಾನ್ ಹಬ್ಬವು ಇಸ್ಲಾಂ ಧರ್ಮದಲ್ಲಿ ಅತ್ಯಂತ ಪವಿತ್ರವಾದ ಹಬ್ಬವಾಗಿದ್ದು, ಒಂದು ತಿಂಗಳ ಕಾಲ ಶ್ರದ್ಧಾ–ಭಕ್ತಿಯಿಂದ ಉಪವಾಸ ಆಚರಿಸುವ ಮೂಲಕ ಮನಸ್ಸು ಮತ್ತು ಆತ್ಮವನ್ನು ಶುದ್ಧೀಕರಿಸುವ ಮಹತ್ವದ ಕಾಲವಾಗಿದೆ ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.

ನಗರದ ಶಾಹಿ ಈದಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ರಂಜಾನ್ ಹಬ್ಬದ ಪ್ರಾರ್ಥನೆಯಲ್ಲಿ ಭಾಗವಹಿಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತವು ವಿವಿಧತೆಯಲ್ಲಿ ಏಕತೆಯನ್ನು ಸಾಧಿಸಿರುವ ಮಹಾನ್ ರಾಷ್ಟ್ರವಾಗಿದ್ದು, ಅನೇಕ ಜಾತಿ–ಧರ್ಮಗಳಿದ್ದರೂ ಸಹ ನಾವು ಎಲ್ಲರೂ ಸೌಹಾರ್ದದಿಂದ ಬದುಕುತ್ತಿರುವುದು ದೇಶದ ಶಕ್ತಿ ಎಂದರು.

ಈ ಪವಿತ್ರ ರಂಜಾನ್ ಹಬ್ಬದ ಸಂದರ್ಭದಲ್ಲಿ ಭಗವಂತನು ಎಲ್ಲರಿಗೂ ಆಯುಷ್ಯ, ಆರೋಗ್ಯ, ಸುಖ, ಶಾಂತಿ ಮತ್ತು ನೆಮ್ಮದಿ ನೀಡಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಪ್ರಾರ್ಥನೆಯಲ್ಲಿ ಭಾಗವಹಿಸಿರುವುದು ತುಂಬಾ ಸಂತೋಷದ ವಿಚಾರವಾಗಿದ್ದು, ಅಲ್ಲಾಹನ ಪ್ರಾರ್ಥನೆಯಲ್ಲಿ ಭಾಗಿಯಾಗುವುದು ಆತ್ಮೀಯ ಸಂತೋಷವನ್ನು ನೀಡುತ್ತದೆ ಎಂದರು.

ಇಂದೇ ಯುಗಾದಿ ಹಬ್ಬವನ್ನು ಕೂಡ ಆಚರಿಸಲಾಗುತ್ತಿದ್ದು, ಇದು ಹೊಸ ವರ್ಷದ ಆರಂಭವಾಗಿದೆ. ಈ ಹೊಸ ವರ್ಷ ಎಲ್ಲರ ಜೀವನದಲ್ಲಿ ಹೊಸ ಆಶೆಗಳು ಮತ್ತು ಬೆಳಕನ್ನು ತರಲಿ ಎಂದು ಹಾರೈಸಿದರು. ರಂಜಾನ್ ಹಾಗೂ ಯುಗಾದಿ ಹಬ್ಬಗಳ ಹಾರ್ದಿಕ ಶುಭಾಶಯಗಳನ್ನು ತಿಳಿಸಿದ ಅವರು, ಜಮಖಂಡಿಯಲ್ಲಿ ಹಿಂದೂ–ಮುಸ್ಲಿಂ ಸೌಹಾರ್ದತೆ ವಿಶೇಷವಾಗಿದ್ದು, ಪರಸ್ಪರ ಹಬ್ಬಗಳಲ್ಲಿ ಭಾಗವಹಿಸಿ ಸೇವೆ ಸಲ್ಲಿಸುವುದು ಜಮಖಂಡಿಯ ಹೆಮ್ಮೆ ಎಂದು ಹೇಳಿದರು.

ಈ ರೀತಿಯ ಸೌಹಾರ್ದತೆಯನ್ನು ಮುಂದಿನ ದಿನಗಳಲ್ಲಿ ಇನ್ನಷ್ಟು ಬಲಪಡಿಸೋಣ. ಎಲ್ಲರೂ ಒಗ್ಗಟ್ಟಿನಿಂದ ಪ್ರೀತಿ ಮತ್ತು ಸಹೋದರತೆಯಿಂದ ಬದುಕೋಣ ಎಂದು ಹೇಳಿದರು.ಜಾಮಿಯಾ ಮಸಿದಿ ಅದ್ಯಕ್ಷ ಮಹ್ಮದ ಮುಬಾರಕ್ ಕಾಝಿ,ಮೌಲಾನಾ ಮುಫ್ತಿ ಯುನ್ನೂಸ್ ಚಿಂಚಲಿ,ಡಿ.ವಾಯ್.ಎಸ್.ಪಿ ಸಯ್ಯದ ರೋಷನ್ ಜಮೀರ,ಆಜಮ ಝುಂಡೆ,ಫಕೀರಸಾಬ ಬಾಗವಾನ, ಇಮಾಮಸಾಬ್ ಬಾಗವಾನ,ಬಶೀರ ತಾಂಬೋಳಿ,ಮಹ್ಮದ ಮುಬಾರಕ್ ಕಾಝಿ,ಹುಸೇನ್ ಟಿನ್ನಮೇಕರ,ಮುಸ್ತಾಕ್ ಝುಂಡೆ,ಹಾರೂನ್ ಮಕಾಂದಾರ,ಅಲ್ತಾಪ ಬಾಗವಾನ,ರಫೀಕ್ ಝುಂಡೆ,ಜಾಕೀರ ಹುಸೇನ್ ನದಾಪ ಸೇರಿದಂತೆ ಇನ್ನಿತರರು ಇದ್ದರು

## ಕಾರು ಡಿಕ್ಕಿ: ಬಾಲಕ ಸಾವು

**ಕಲಬುರಗಿ,ಮಾ.21–**ಕಾರು ಡಿಕ್ಕಿ ಹೊಡೆದು ಬಾಲಕನೊಬ್ಬ ಮೃತಪಟ್ಟಿರುವ ಘಟನೆ ಸಂಚಾರಿ ಪೊಲೀಸ್ ಠಾಣೆ–2ರ ವ್ಯಾಪ್ತಿಯಲ್ಲಿ ನಡೆದಿದೆ.
ಶಹಬಾಜ್ ಶೇಖ್ ತಂದೆ ಸಾಜೀದ್ ಶೇಖ್ರ (9) ಮೃತಪಟ್ಟ ಬಾಲಕ.
4ನೇ ತರಗತಿಯಲ್ಲಿ ಓದುತ್ತಿದ್ದ ಬಾಲಕ ಯುಗಾದಿ ಪ್ರಯುಕ್ತ ಶಾಲೆಗೆ ರಜೆ ಇದ್ದುದ್ದರಿಂದ ಅಕ್ಕಪಕ್ಕದ ಮನೆಯ ಮಕ್ಕಳೊಂದಿಗೆ ಆಟವಾಡುತ್ತ ರಸ್ತೆ ಪಕ್ಕದಲ್ಲಿ ನಿಂತಿದ್ದ. ಈ ವೇಳೆ ಆಬೀದ್ ಹುಸೇನ್ ಎಂಬುವವರು ಅವಸರದಲ್ಲಿ ಕಾರು ರಿವರ್ಸ್ ತೆಗೆದುಕೊಳ್ಳುವಾಗ ಬಾಲಕನಿಗೆ ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡಿದ್ದ. ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ. ಈ ಸಂಬಂ ಸಂಚಾರಿ ಪೊಲೀಸ್ ಠಾಣೆ–2ರಲ್ಲಿ ಪ್ರಕರಣ ದಾಖಲಾಗಿದೆ.

# ಒಳ ಮೀಸಲಾತಿ ಅನ್ಯಾಯ ವಿರೋಧಿಸಿ ಸೋಮವಾರ ನರಸೀಪುರದಿಂದ ಮೈಸೂರಿಗೆ ಪಾದಯಾತ್ರೆ



**ತಿ.ನರಸೀಪುರ ಮಾ.21–** ಒಳ ಮೀಸಲಾತಿಯಲ್ಲಿ ಬಲಗೈ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಲು ಹಾಗೂ ನ್ಯಾ.ನಾಗಮೋಹನ ದಾಸ್ ವರದಿಯನ್ನು ತಿರಸ್ಕರಿಸುವಂತೆ ಆಗ್ರಹಿಸಿ ಮಾ.23ರ ಸೋಮವಾರ ತಿ.ನರಸಿಪುರದಿಂದ ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ವರೆಗೆ ಪಾದಯಾತ್ರೆ ಚಳುವಳಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿ.ಪಂ ಮಾಜಿ ಅಧ್ಯಕ್ಷ ಎಸ್.ಎನ್.ಸಿದ್ಧಾರ್ಥ ಹೇಳಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಶುಕ್ರವಾರ ಪಾದಯಾತ್ರೆ ಚಳುವಳಿಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ನ್ಯಾಯಮೂರ್ತಿಯಾಗಿ ಗೌರವಾನ್ವಿತ ಹುದ್ದೆಯನ್ನು ನಿರ್ವಹಿಸಿದ ನಾಗ ಮೋಹನ್ ದಾಸ್ ಅವರು ಪ.ಜಾತಿಯ ಮೀಸಲಾತಿಯನ್ನು ಮಾದಿಗ ಸಮುದಾಯಕ್ಕೆ ಮೀಸಲಿಟ್ಟು ಒಳಮಿಸಲಾತಿಗೆ ಅವೈಜ್ಞಾನಿಕವಾಗಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ ಎಂದು ಆರೋಪಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಅವಜ್ಞಾನಿಕ ಒಳ ಮೀಸಲು ಜಾರಿ ಮಾಡುವ ಮೂಲಕ ಹಲವು ದಶಕಗಳಿಂದ ಬೆಂಬಲಿಸಿಕೊಂಡು ಬಂದಂತಹ ಬಲಗೈ(ಹೊಲಯ) ಸಮುದಾಯಕ್ಕೆ ಅನ್ಯಾಯ ಮಾಡಲು ಮುಂದಾಗಿದೆ. ವಿದ್ಯಾರ್ಥಿಗಳು ಮತ್ತು ಯುವಕರಿಗೆ ಶಿಕ್ಷಣ ಹಾಗೂ ಉದ್ಯೋಗ ಅವಕಾಶವನ್ನು ಕಿತ್ತುಕೊಳ್ಳುವ ಒಳ ಮೀಸಲು ಅನ್ಯಾಯವನ್ನು ಸರಿಪಡಿಸಬೇಕು. ಬಲಗೈ ಸಂಬಂಧಿತ ಜಾತಿಗಳಿಗೆ ಮರಣ ಶಾಸನ ಆಗಿರುವ ನಾಗ ಮೋಹನ್ ದಾಸ್ ವರದಿಯನ್ನು ತಿರಸ್ಕರಿಸಬೇಕು. ಅಲ್ಲಿಯವರೆಗೂ ಪ್ರತಿಭಟನೆ, ಚಳುವಳಿ ನಡೆಯಲಿವೆ. ಈ ಹಿನ್ನಲೆಯಲ್ಲಿ ಸೋಮವಾರ ತಾಲೂಕಿನಿಂದ ಜಿಲ್ಲಾ ಮಟ್ಟದ ಪಾದಯಾತ್ರೆ ಚಳುವಳಿಯನ್ನು ಆಯೋಜಿಸಲಾಗಿದೆ ಎಂದು ಎಸ್.ಎನ್.ಸಿದ್ಧಾರ್ಥ ತಿಳಿಸಿದರು.

ಹೋರಾಟ ಸಮಿತಿ ಸಂಚಾಲಕ , ವಿಚಾರವಾದಿ ಕೆ.ಎನ್.ಪ್ರಭುಸ್ವಾಮಿ ಮಾತನಾಡಿ, ಮಾ.23ರ ಸೋಮವಾರ ಬೆಳಗ್ಗೆ 6 ಗಂಟೆಗೆ ತಾಲೂಕು ಕಚೇರಿ ಮುಂಭಾಗ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಪಾದಯಾತ್ರೆ ಚಳುವಳಿಯನ್ನು ಆರಂಭಿಸಲಾಗುವುದು. ಜಿಲ್ಲಾ ಮಟ್ಟದ ಬೃಹತ್ ಹೋರಾಟಕ್ಕೆ ಮೈಸೂರು ನಗರ ಸೇರಿದಂತೆ ತಾಲೂಕು ಹಾಗೂ ಹೆಚ್ ಡಿ ಕೋಟೆ ತಾಲೂಕಿನಿಂದ ಬರುವ ಪಾದಯಾತ್ರೆ ಚಳುವಳಿಕಾರರು ಜತೆಯಾಗಲಿದ್ದಾರೆ. ತಾಲೂಕಿನ ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.ಒಳ ಮೀಸಲಾತಿಯಲ್ಲಿ ಬಲಗೈ ಸಮುದಾಯಕ್ಕೆ ಅನ್ಯಾಯ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಯುವ ಮುಖಂಡ ಸೋಸಲೆ ಎ.ಶಿವಕುಮಾರ್ ಹರಿಹಾಯ್ದರು. ಸಭೆಯಲ್ಲಿ ವ ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ಎನ್.ಲಿಂಗಪ್ಪಾಜಿ, ದಸಂಸ ರಾಜ್ಯ ವಿಭಾಗಿಯ ಸಂಚಾಲಕ ಆಲಗೂಡು ಎಸ್. ಚಂದ್ರಶೇಖರ್, ಮುಖಂಡರಾದ ಗಣೇಶಸ್ವಾಮಿ, ಎಂ.ಕೆ.ಸಿದ್ದ ರಾಜು, ಎಂ.ಆರ್.ಸುಂದರ್, ಎಲ್.ಉಮಾಪತಿ, ನಾಗರಾಜ ಮೂರ್ತಿ, ಎಸ್.ಕೆ. ಶಿವಕುಮಾರ್, ಎಸ್.ವೆಂಕಟರಮಣಸ್ವಾಮಿ, ಎನ್.ಮಹೇಶ್, ಎಂ.ಗೋವಿಂದರಾಜು, ಕೆಂಚಪ್ಪ, ಮಹದೇವಸ್ವಾಮಿ, ನಿರಂಜನ್, ಎ.ನಾಗರಾಜು(ಪಾಪು), ಡಿ.ಎಸ್.ಪ್ರೇಮಕುಮಾರ್, ನಿಲಸೋಗೆ ಉಮೇಶ್ ಹಾಗೂ ಇತರರು ಇದ್ದರು.

# ದಾಖಲಾತಿ ಅಭಿಯಾನ ಯಶಸ್ವಿಗೆ ಕರೆ

**ಬೆಂಗಳೂರು.ಮಾ21:** ಸಾಲಿನ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಶಾಲಾ–ಕಾಲೇಜುಗಳಲ್ಲಿ ದಾಖಲಾತಿ ಅಭಿಯಾನ ಯಶಸ್ವಿಯಾಗಿ ನಡೆಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಸಿಇಓಗಳಿಗೆ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಪತ್ರ ಬರೆದಿದ್ದಾರೆ.

ಪತ್ರದಲ್ಲಿ ಸರ್ಕಾರಿ ಶಾಲಾ–ಕಾಲೇಜುಗಳಲ್ಲಿ ಇರುವ ಸೌಲಭ್ಯಗಳನ್ನು ಪ್ರಚಾರ ಮಾಡುವ ಮೂಲಕ ದಾಖಲಾತಿ ಅಭಿಯಾನ ನಡೆಸುವಂತೆ ಮನವಿ ಮಾಡಲಾಗಿದೆ. ಡಿಸಿಗಳು ಮತ್ತು ಸಿಇಓ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆಯೂ ಪತ್ರದಲ್ಲಿ ಉಲ್ಲೇಖ ಮಾಡಲಾಗಿದೆ.

ಯಾವ ಮಗುವು ಶಿಕ್ಷಣದಿಂದ ವಂಚಿತವಾಗದಂತೆ ಜಿಲ್ಲಾದ್ಯಂತ ವ್ಯವಸ್ಥಿತವಾಗಿ ದಾಖಲಾತಿ ಆಂದೋಲನವನ್ನು ಹಮ್ಮಿಕೊಳ್ಳಬೇಕು. ಪ್ರತಿ ಗ್ರಾಮದಲ್ಲಿ ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು ಮತ್ತು ಹಳೆಯ ವಿದ್ಯಾರ್ಥಿಗಳ ಸಹಕಾರದೊಂದಿಗೆ ಮನೆ ಮನೆಗೆ ಭೇಟಿ ನೀಡಿ, ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಲು ಮನವೊಲಿಸಬೇಕು.



ಶಾಲೆಗಳಲ್ಲಿ ಹಳೆಯ ವಿದ್ಯಾರ್ಥಿಗಳ ವಾಟ್ಸಾಪ್ ಗ್ರೂಪ್‌ಗಳ ಮೂಲಕ ಶಾಲಾ ಅಭಿವೃದ್ಧಿ ಮತ್ತು ದಾಖಲಾತಿ ಹೆಚ್ಚಿಸುವಲ್ಲಿ ಅವರ ನೆರವು ಪಡೆಯಬೇಕು. ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಯಾವುದೇ ತರಗತಿಗಳಿಗೆ ದಾಖಲಾತಿ ಮಾಡಿಕೊಳ್ಳಬೇಕು ಎಂದು ಮಧು ಬಂಗಾರಪ್ಪ ತಿಳಿಸಿದ್ದಾರೆ.

## ಒಳಮೀಸಲಾತಿ ವಿರೋಧಿಸಿ 25ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ: ಪಾಸ್ವಾನ್

**ಬೀದರ್: ಮಾ.20:**ಒಳಮೀಸಲಾತಿ ಜಾರಿಗೆ ವಿರೋಧ ವ್ಯಕ್ತಪಡಿಸಿ ಹಾಗೂ ಹಳೆಯ ಮೀಸಲಾತಿ ವ್ಯವಸ್ಥೆಯನ್ನು ಮುಂದುವರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟವು ಮಾರ್ಚ್ 25 ಬೆಂಗಳೂರಿನ ಫ್ರಿಡಮ್ ಪಾರ್ಕ್ನಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಪ್ರಮುಖರಾದ ಬಾಬುರಾವ ಪಾಸ್ವಾನ್ ತಿಳಿಸಿದರು.




ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು, ರಾಜ್ಯ ಸರ್ಕಾರ ನಾಗಮೋಹನದಾಸ್ ವರದಿ ತಿರಸ್ಕರಿಸಿ, ಇನ್ನೊಂದು ಸಾರಿ ಜಾತಿ ಜನಗಣತಿ ಸಮಿಕ್ಷೆ ಮಾಡಬೇಕು. ರೋಷ್ಟರ್ ಪದ್ದತಿಯ ಒಳ ಮೀಸಲಾತಿ ಯಾವುದೇ ಕಾರಣಕ್ಕೂ ಬೇಡವೇ ಬೇಡ. 56,000 ಹುದ್ದೆಗಳನ್ನು ಹಳೆ ಮೀಸಲಾತಿ ಆಧಾರದಂತೆ ಭರ್ತಿ ಮಾಡಿ, ಎಲ್ಲ ಪರಿಶಿಷ್ಟರಿಗೆ ನ್ಯಾಯ ದೊರಕಿಸಿ ಕೊಡಬೇಕೆಂದು ಕರೆ ನೀಡಿದರು.

ಕಾಂಗ್ರೆಸ್ ಸರ್ಕಾರ ಶತ ಪ್ರತಿಶತದಷ್ಟು ಪರಿಶಿಷ್ಟ ಜಾತಿಯ ಬಲಗೈ ಪಂಗಡದವರ ಮತ ಪಡೆದು ಅಧಿಕಾರಕ್ಕೆ ಬಂದಿದ್ದು, ಅಧಿಕಾರಕ್ಕೇರಿದ ಕ್ಷಣ ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿ ಎರಡು ವರೆ ವರ್ಷಗಳು ಕಳೆದರೂ ಕುಂಟುನೆಪವೊಡ್ಡಿ ಬಲಗೈ ಹಾಗೂ ಎಡಗೈ ಜಾತಿಗಳ ನಡುವೆ ಜಗಳ ಹಚ್ಚುವ ಕಾರ್ಯ ಮಾಡುತ್ತಿದೆ. ನಮ್ಮ ಹಕ್ಕು ಎತ್ತಿ ಹಿಡಿಯುವ ಸರ್ಕಾರವೇ ನಮ್ಮನ್ನು ಚೆನ್ನಾಗಿ ತುಳಿಯುವ ಕಾರ್ಯಕ್ಕೆ ಮುಂದಾಗಿದೆ ಎಂದು ಹರಿಹೈದರು.ಸರ್ವೋಚ್ಚ ನ್ಯಾಯಾಲಯವು 2024 ಆಗಸ್ಟ್ 1ರಂದು ನೀಡಿದ ತೀರ್ಪಿನಲ್ಲಿ ಒಳಮೀಸಲಾತಿ ಜಾರಿಗೊಳಿಸಲು ರಾಜ್ಯಗಳಿಗೆ ಅಧಿಕಾರವಿದೆ ಎಂದು ತಿಳಿಸಿದರೂ, ಅದು ಸಮರ್ಪಕ ಅಂಕಿ ಅಂಶಗಳ ಆಧಾರದಲ್ಲಿ ಮಾತ್ರ ಜಾರಿಯಾಗಬೇಕು ಎಂದು ಸ್ಪಷ್ಟಪಡಿಸಿದೆ. ಆದರೆ ಕರ್ನಾಟಕ ಸರ್ಕಾರವು ಈ ಮಾರ್ಗಸೂಚಿಗಳನ್ನು ಪಾಲಿಸದೆ ಕ್ರಮ ಕೈಗೊಂಡಿದೆ ಎಂದು ಆರೋಪಿಸಿದರು.ನ್ಯಾಯಮೂರ್ತಿ ನಾಗಮೋಹನ್‌ದಾಸ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಏಕ ಸದಸ್ಯ ಆಯೋಗವು ಸಮಗ್ರ ಸಮೀಕ್ಷೆ ನಡೆಸದೇ ಹಾಗೂ ಅಗತ್ಯ ಅಂಕಿ ಅಂಶಗಳನ್ನು ಸಂಗ್ರಹಿಸದೇ ವರದಿ ಸಲ್ಲಿಸಿದೆ ಎಂದು ಸಂಘಟನೆ ದೂರಿದೆ. ಈ ವರದಿಯ ಆಧಾರದಲ್ಲಿ ಸರ್ಕಾರವು 2025 ಸೆಪ್ಟೆಂಬರ್ 3ರಂದು ಹೊರಡಿಸಿದ ಮೀಸಲಾತಿ ಆದೇಶವು ಪರಿಶಿಷ್ಟ ಜಾತಿಯ ಬಲಗೈ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಹೇಳಿದರು.

ಆಯೋಗವು ಜನಸಂಖ್ಯೆ ಮಾಹಿತಿಯನ್ನು ತಪ್ಪಾಗಿ ವರ್ಗೀಕರಿಸಿದ್ದು, ಬಲಗೈ ಸಮುದಾಯಕ್ಕೆ ಮೀಸಲಾತಿ ಸೌಲಭ್ಯ ಕಡಿಮೆಯಾಗುವಂತೆ ಮಾಡಲಾಗಿದೆ. ಇದರಿಂದ ಉನ್ನತ ಹುದ್ದೆಗಳ ಅವಕಾಶಗಳು ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.ಸರ್ಕಾರವು ಶೇಕಡ 15+3ರ ಮೀಸಲಾತಿ ಪ್ರಮಾಣದಲ್ಲಿ ನೇಮಕಾತಿ ಮಾಡಲು ಆದೇಶ ಹೊರಡಿಸಿದ್ದು, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿಯನ್ನು ಮತ್ತೆ ಜಾರಿಗೊಳಿಸುವ ಯತ್ನ ನಡೆದಿದೆ ಎಂಬ ಆರೋಪವೂ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ, ಒಳಮೀಸಲಾತಿ ಜಾರಿಗೊಳಿಸದಂತೆ ಸರ್ಕಾರಕ್ಕೆ ಒತ್ತಾಯಿಸುವುದಕ್ಕಾಗಿ ಒಕ್ಕೂಟದ ಅಧ್ಯಕ್ಷರಾದ ಪೂಜ್ಯ ಜ್ಞಾನಪ್ರಕಾಶ ಸ್ವಾಮೀಜಿ, ಕಾರ್ಯಾಧ್ಯಕ್ಷರಾದ ಡಿ.ಚಂದ್ರಶೇಖರಯ್ಯ, ಸಂಚಾಲಕರಾದ ನಿವೃತ್ತ ಐಎಎಸ್ ಅಧಿಕಾರಿ ಸಿದ್ದಯ್ಯ, ಮಾಜಿ ಮಹಾಪೌರ ಸಂಪತ್ ರಾಜ್ ಸೇರಿದಂತೆ ಹಲವು ಮುಖಂಡರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದು, ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮುಂದಿನ ಹೋರಾಟ ತೀವ್ರಗೊಳಿಸುವುದಾಗಿ ತಿಳಿಸಿದ್ದಾರೆ. ಆದ್ದರಿಂದ ಈ ಪ್ರತಿಭಟನೆಯಲ್ಲಿ ಬೀದರ್ ಜಿಲ್ಲೆಯಿಂದ ಹೆಚ್ಚಿನ ಜನರು ಭಾಗವಹಿಸಿ ಪ್ರತಿಭಟನೆಗೆ ಕೈ ಜೋಡಿಸಲು ಪಾಸ್ವಾನ್ ಕರೆ ಕೊಟ್ಟರು..

ಒಕ್ಕೂಟದ ಮತ್ತೋರ್ವ ಮುಖಂಡರಾದ ರಮೇಶ ಡಾಕುಳಗಿ ಮಾತನಾಡಿ, 2023ರಲ್ಲಿ ಕಾಂಗ್ರೆಸ್ ಸರ್ಕಾರವು ಚಿತ್ರದುರ್ಗ ಸಮಾವೇಶದಲ್ಲಿ ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿತ್ತು. ಆದರೆ ಮಾತು ತಪ್ಪಿದೆ. ಈ ಹಿಂದೆ ಬಸವರಾಜ ಬೊಮ್ಮಾಯಿ ಸರ್ಕಾರ ಇದ್ದಾಗ ಒಳ ಮೀಸಲಾತಿಗಾಗಿ ಕೇಂದ್ರಕ್ಕೆ ಪ್ರಸ್ತಾವನೆ ಕಳಿಸಿತ್ತು. ಆದರೆ ಪ್ರಧಾನಿ ನರೇಂದ್ರ ಮೋದಿಯವರ ರಾಜ್ಯ ಸರ್ಕಾರ ಅದನ್ನು ಕಡೆಗಣಿಸಿತ್ತು. ನಂತರ ಸರ್ವೋಚ್ಚ ನ್ಯಾಯಾಲಯವು ತನ್ನ ಆದೇಶದಲ್ಲಿ ಒಳ ಮೀಸಲಾತಿ ಜಾರಿ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ನೀಡಿದೆ. ಆದರೂ ಕೇಂದ್ರ ಸರ್ಕಾರ ಕೂಡಲೇ ಸಂವಿಧಾನದ 9ನೇ ಪರಿಶ್ಛೆದದಲ್ಲಿ ಅದನ್ನು ಸೇರಿಸಿ ಎಲ್ಲ ರಾಜ್ಯಗಳಿಗೆ ಅನುಕುಲ ಆಗುವ ರೀತಿಯಲ್ಲಿ ಅದನ್ನು ಅನುಷ್ಟಾನಗೋಲಿಸಬೇಕು. ಈಗಾಗಲೇ ಒಳ ಮೀಸಲಾತಿ ಜಾರಿ ಮಾಡಿರುವ ರಾಜ್ಯಗಳಾದ ತಮಿಳುನಾಡು, ಆಂದ್ರಪ್ರದೇಶ, ತೆಲಂಗಾಣ, ಹರಿಯಾಣ ಇತ್ಯಾದಿ ರಾಜ್ಯಗಳಿಗೆ ಹೋಗಿ ಅಧ್ಯಯನಗೈದು ರಾಜ್ಯದಲ್ಲೂ ಅದನ್ನು ಸಮರ್ಪಕ ರೀತಿಯಲ್ಲಿ ಜಾರಿಗೊಳಿಸಲು ಮುಂದೆ ಬರಬೇಕು. ಆದಿ ದ್ರಾವಿಡ, ಆದಿ ಆಂದ್ರ, ಆದಿ ಕರ್ನಾಟಕದ ಜನರು ಬಲಗೈ ಹಾಗೂ ಎಡಗೈ ಸಮುದಾಯಗಳಲ್ಲಿ ಇದ್ದು, ಒಂದೆ ಪಂಗಡದಲ್ಲಿ ಅವರನ್ನು ಗುರುತಿಸುವ ಕಾರ್ಯ ಆಗಬೇಕು, ಅವೈಜ್ಞಾನಿಕ, ಅಪೂರ್ಣ, ದೋಷಪೂರಿತ ಹಾಗೂ ಪಕ್ಷಪಾತದಿಂದ ಕೂಡಿರುವ ನ್ಯಾಯಮೂರ್ತಿ ನಾಗಮೋಹನ್‌ದಾಸ್ ರವರ ಆಯೋಗದ ವರದಿಯನ್ನು ರಾಜ್ಯ ಸರ್ಕಾರವು ತಿರಸ್ಕರಿಸಬೇಕು, ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕೈಗೊಂಡಿರುವ ಕುಟುಂಬಗಳ ಸಮೀಕ್ಷೆಯ ಅಂಕಿ ಅಂಶಗಳೊಂದಿಗೆ ನ್ಯಾಯಮೂರ್ತಿ ನಾಗಮೋಹನ್‌ದಾಸ್ ರವರ ಆಯೋಗದ ಅಂಕಿ ಅಂಶಗಳನ್ನು ಹೋಲಿಕೆ ಮಾಡಿ, ವ್ಯತ್ಯಾಸಗಳು ಕಂಡುಬಂದಲ್ಲಿ ಪರಿಶಿಷ್ಟ ಜಾತಿಯ ಎಲ್ಲಾ ಕುಟುಂಬಗಳ ಮತ್ತೊಮ್ಮೆ ಸಮೀಕ್ಷೆ ಮಾಡಬೇಕೆಂದು ಒತ್ತಾಯಿಸಿದರು.

ರಾಜ್ಯ ಸರ್ಕಾರವು ದಿನಾಂಕ: 03.09.2025ರಂದು ಯಾವುದೇ ಮಾನದಂಡವನ್ನು ಅನುಸರಿಸದೇ ಅವೈಜ್ಞಾನಿಕವಾಗಿ ಹೊರಡಿಸಿರುವ ಮೀಸಲಾತಿ ಆದೇಶವನ್ನು ಹಿಂಪಡೆಯಬೃಕು, ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ ಸಕಇ/08/ ಎಸ್.ಎಲ್.ಪಿ/2024 (ಭಾಗ–5) ದಿನಾಂಕ: 08.10.2025ರ ನಿರ್ದೇಶನದಂತೆ ಜಾತಿ ಪ್ರಮಾಣ ಪತ್ರಗಳನ್ನು ಪ್ರವರ್ಗ –ಎ, ಬಿ ಮತ್ತು ಸಿ ಎಂದು ವರ್ಗೀಕರಿಸಿರುವುದನ್ನು ಹಿಂಪಡೆದು ಮೂಲ ಜಾತಿಗಳನ್ನು ನಮೂದಿಸಿ ಜಾತಿ ಪ್ರಮಾಣ ಪತ್ರಗಳನ್ನು ನೀಡಲು ಸೂಕ್ತ ಆದೇಶ ಹೊರಡಿಸಬೇಕು, ಪರಿಶಿಷ್ಟ ಜಾತಿ ಸಮುದಾಯಕ್ಕೆ ಈಗಾಗಲೇ ನೀಡಿರುವ ಖಾಯಂ ಜಾತಿ ಪ್ರಮಾಣ ಪತ್ರಗಳನ್ನು ಹೊಸ ಜಾತಿ ಪ್ರಮಾಣ ಪತ್ರಗಳೊಂದಿಗೆ ಪರಿಗಣಿಸಲು ಸೂಕ್ತ ಆದೇಶ ಹೊರಡಿಸಬೇಕೆಂದರು.ಪರಿಶಿಷ್ಟ ಜಾತಿ ಬಲಗೈ ಸಮುದಾಯಕ್ಕೆ ಸೇರಿರುವ 63 ಜಾತಿಗಳನ್ನು ಬಲಗೈ ಗುಂಪಿನಲ್ಲಿ ಉದ್ಯೋಗ, ಶಿಕ್ಷಣ ಮತ್ತು ಇತರೆ ಸೌಲಭ್ಯ ಪಡೆಯಲು ಅಧಿಸೂಚನೆ ಹೊರಡಿಸಬೇಕು, ಚಿತ್ರದುರ್ಗ ಜಿಲ್ಲೆಯಲ್ಲಿ ಹೊಲಯ ಸಮುದಾಯ ಕೇವಲ 223 ಎಂದು ನ್ಯಾಯಮೂರ್ತಿ ನಾಗಮೋಹದಾಸ್ ವರದಿಯಲ್ಲಿ ದಾಖಲಿಸಿರುವುದನ್ನು ಮರು ಪರಿಶೀಲಿಸಿ ಉದ್ದೇಶ ಪೂರ್ವಕವಾಗಿ ಬಲಗೈ ಸಮುದಾಯದ ಜನಸಂಖ್ಯೆಯನ್ನು ಕಡಿಮೆ ಮಾಡಿರುವ ಆಯೋಗದ ಅಧ್ಯಕ್ಷರು ಹಾಗೂ ಅಧಿಕಾರಿಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆಯನ್ವಯ ಮೊಕದ್ದಮೆ ದಾಖಲಿಸಲು ವಿಶೇಷ ತನಿಖಾ ತಂಡ ರಚಿಸಬೇಕು ಎಂದು ಡಾಕುಳಗಿ ಹೇಳಿದರು. ಒಕ್ಕೂಟದ ಮುಖಂಡ ಪ್ರದೀಪ ನಾಟೇಕರ್ ಮಾತನಾಡಿದರು.

ಒಕ್ಕೂಟದ ಇತರೆ ಪ್ರಮುಖರಾದ ಶ್ರೀಪತರಾವ ದೀನೆ, ಶಿವಕುಮಾರ ನೀಲಿಕಟ್ಟಿ, ಸಂದೀಪ ಕಾಂಟೆ, ಅಶೋಕ ಮಾಳಗೆ, ಅಂಬಾದಾಸ ಗಾಯಕವಾಡ, ಸಾಯಿ ಶಿಂಧೆ, ರಘುನಾಥ ಗಾಯಕವಾಡ, ಅವಿನಾಶ ದೀನೆ, ರಾಜಕುಮಾರ ಶೇರಿಕಾರ, ಮೌಲಪ್ಪ ಮಾಳಗೆ, ಜನಾರ್ಧನ ದೀನೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಒಳಮೀಸಲಾತಿ ವಿರೋಧದ ಕಿಡಿ: ಮಾ. 25 ರಂದು ಬೆಂಗಳೂರಿನಲ್ಲಿ ಮಹಾ ಹೋರಾಟ

**ಯಾದಗಿರಿ:ಮಾ.21–** ಒಳಮೀಸಲಾತಿ ಪ್ರಶ್ನೆ ರಾಜ್ಯ ರಾಜಕೀಯ ಮತ್ತು ಸಾಮಾಜಿಕ ವಲಯದಲ್ಲಿ ಮತ್ತೊಮ್ಮೆ ಚರ್ಚೆಯ ಕೇಂದ್ರಬಿಂದುವಾಗಿದ್ದು, ಇದರ ವಿರುದ್ಧ ಸಂಘಟನೆಗಳ ಆಕ್ರೋಶ ತೀವ್ರಗೊಳ್ಳುತ್ತಿದೆ. ನಾಗಮೋಹನ್ ದಾಸ್ ಸಮಿತಿ ಸಲ್ಲಿಸಿದ ವರದಿ ವೈಜ್ಞಾನಿಕತೆ ಹಾಗೂ ಸಮಗ್ರ ಅಂಕಿಅಂಶಗಳ ಆಧಾರದ ಮೇಲೆ ರೂಪುಗೊಂಡಿಲ್ಲ ಎಂದು ಆರೋಪಿಸಿರುವ ಛಲವಾದಿ ಮಹಾಸಭೆ, ಬಲಗೈ ಸಮುದಾಯದ ಹಕ್ಕುಗಳಿಗೆ ಭಾರೀ ಧಕ್ಕೆಯಾಗುತ್ತಿದೆ ಎಂದು ಗಂಭೀರವಾಗಿ ಎಚ್ಚರಿಸಿದೆ.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಾಸಭೆಯ ಜಿಲ್ಲಾ ಅಧ್ಯಕ್ಷ ವೀರಭದ್ರಪ್ಪ ಯಡ್ಡಳ್ಳಿ, "ಒಳಮೀಸಲಾತಿ ಎಂಬ ಹೆಸರಿನಲ್ಲಿ ಜಾತಿಗಳ ನಡುವೆ ಅಸಮತೋಲನ ಸೃಷ್ಟಿಸುವ ಪ್ರಯತ್ನ ನಡೆಯುತ್ತಿದೆ. ರೋಸ್ಟರ್ ವ್ಯವಸ್ಥೆಯಲ್ಲಿಯೂ ಬಲಗೈ ಪಂಗಡದವರಿಗೆ ಅನ್ಯಾಯವಾಗುತ್ತಿರುವುದು ಸ್ಪಷ್ಟವಾಗಿದೆ" ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಇದೇ ಹಿನ್ನಲೆಯಲ್ಲಿ, ಮಾರ್ಚ್ 25ರಂದು ಬೆಂಗಳೂರುನಲ್ಲಿ ಪೂಜ್ಯ ಜ್ಞಾನಪ್ರಕಾಶ ಸ್ವಾಮೀಜಿ ಅವರ ನೇತೃತ್ವದಲ್ಲಿ ಭವ್ಯ ಹಾಗೂ ಐತಿಹಾಸಿಕ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಈ ಹೋರಾಟ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಜನರನ್ನು ಒಂದೇ ವೇದಿಕೆಯಲ್ಲಿ ಸೇರಿಸುವ ನಿರೀಕ್ಷೆ ಇದೆ ಎಂದು ಅವರು ತಿಳಿಸಿದರು.

ರಾಜ್ಯ ಸರ್ಕಾರ ತಕ್ಷಣವೇ ನಾಗಮೋಹನ್ ದಾಸ್ ವರದಿಯನ್ನು ಸಂಪೂರ್ಣವಾಗಿ ತಿರಸ್ಕರಿಸಿ, ನಿಖರ ಹಾಗೂ ಸಮಗ್ರ ಜಾತಿ ಜನಗಣತಿ ಸಮೀಕ್ಷೆಯನ್ನು ಮರುನಡೆಸಬೇಕು. ಇಲ್ಲವಾದಲ್ಲಿ ಸಾಮಾಜಿಕ ನ್ಯಾಯದ ಮೂಲಭೂತ ತತ್ವಗಳಿಗೆ ಧಕ್ಕೆಯಾಗಲಿದೆ ಎಂದು ಅವರು ಎಚ್ಚರಿಸಿದರು. ಯಾವುದೇ ಕಾರಣಕ್ಕೂ ರೋಸ್ಟರ್ ಪದ್ಧತಿಯ ಒಳಮೀಸಲಾತಿ ಜಾರಿಗೊಳಿಸಬಾರದು ಎಂಬುದು ನಮ್ಮ ದೃಢ ನಿಲುವು ಎಂದು ಸ್ಪಷ್ಟಪಡಿಸಿದರು.

ಈ ವೇಳೆ ಮಾತನಾಡಿದ ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ ಸಮಿತಿಯ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಪೂಜಾರಿ, "ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಬಲಗೈ ಸಮುದಾಯದ ಮತಗಳಿಂದಲೇ ಅಧಿಕಾರಕ್ಕೇರಿದರೂ, ಅವರ




ನಿರೀಕ್ಷೆಗಳನ್ನು ಈಡೇರಿಸಲು ವಿಫಲವಾಗಿದೆ. ಬದಲಾಗಿ ಜಾತಿಗಳ ನಡುವೆ ವಿಭಜನೆಯ ರಾಜಕಾರಣ ನಡೆಸುತ್ತಿದೆ" ಎಂದು ಕಿಡಿಕಾರಿದರು.

ಇದೇ ವೇಳೆ, ಭಾರತದ ಸರ್ವೋಚ್ಚ ನ್ಯಾಯಾಲಯವು 2024ರ ಆಗಸ್ಟ್ 1ರಂದು ನೀಡಿದ ಮಹತ್ವದ ತೀರ್ಪನ್ನು ಉಲ್ಲೇಖಿಸಿದ ಅವರು, ಒಳಮೀಸಲಾತಿ ಜಾರಿಗೆ ರಾಜ್ಯಗಳಿಗೆ ಅಧಿಕಾರವಿದ್ದರೂ, ಅದು ಸಮಗ್ರ ಹಾಗೂ ನಿಖರ ಅಂಕಿಅಂಶಗಳ ಆಧಾರದ ಮೇಲೆ ಮಾತ್ರ ಜಾರಿಯಾಗಬೇಕು ಎಂದು ಸ್ಪಷ್ಟ ನಿರ್ದೇಶ ನೀಡಲಾಗಿದೆ. ಆದರೆ ರಾಜ್ಯ ಸರ್ಕಾರ ಈ ಮಾರ್ಗಸೂಚಿಗಳನ್ನು ಕಡೆಗಣಿಸುತ್ತಿದೆ ಎಂಬ ಗಂಭೀರ ಆರೋಪವನ್ನು ಮಾಡಿದರು. ಮಾರ್ಚ್ 25ರಂದು ನಡೆಯುವ ಈ ಮಹಾ ಪ್ರತಿಭಟನೆಯಲ್ಲಿ ಯಾದಗಿರಿ ಜಿಲ್ಲೆಯಿಂದಲೇ ಸಾವಿರಾರು ಕಾರ್ಯಕರ್ತರು ಭಾಗವಹಿಸಲಿದ್ದು, ಬುದ್ಧಿಜೀವಿಗಳು, ಪ್ರಗತಿಪರ ಚಿಂತಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟಕ್ಕೆ ಬಲ ತುಂಬಬೇಕು ಎಂದು ನಾಯಕರು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಗೌರವಾಧ್ಯಕ್ಷ ಡಾ. ಭಗವಂತ ಅನ್ವಾರ್, ಸಂಚಾಲಕ ಶ್ರೀಶೈಲ ಹೊಸ್ಮನಿ, ಉಪಾಧ್ಯಕ್ಷ ಮಾನಪ್ಪ ಕಟ್ಟಿಮನಿ, ಪ್ರಧಾನ ಕಾರ್ಯದರ್ಶಿ ಮರೆಪ್ಪ ಚಟ್ಟೇರಕರ್, ಕಾರ್ಯದರ್ಶಿ ಡಾ. ಗಾಳೆಪ್ಪ ಪೂಜಾರಿ, ಸಹ ಕಾರ್ಯದರ್ಶಿ ಚಂದಪ್ಪ ಮುನಿಪನೋರ, ಸಂಘಟನಾ ಕಾರ್ಯದರ್ಶಿ ಶರಣು ಎಸ್. ನಾಟೇಕಾರ್ ಸೇರಿದಂತೆ ಅನೇಕ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಈದ್ಗಾದಲ್ಲಿ ರಂಜಾನ್ ಪ್ರಾರ್ಥನೆ



**ಬಳ್ಳಾರಿ, ಮಾ.21:** ಕಳೆದ ಒಂದು ತಿಂಗಳ ಕಾಲ ಹಗಲು ವೇಳೆಯಲ್ಲಿ ಉಪವಾಸ ವೃತ ಆಚರಿಸಿದ್ದ ಮುಸ್ಲೀಂ ಸಮುದಾಯದ ಜನತೆ ಇಂದು ರಂಜಾನ್ ಹಬ್ಬದ ಅಂಗವಾಗಿ ನಗರದ ಹೊರ ವಲಯದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಹಿಂದುಗಳು ಯುಗಾದಿ ಹಬ್ಬಕ್ಕೆ ಹೊಸ ಬಟ್ಟೆ ಧರಿಸುವಂತೆ ಮುಸ್ಲಿರು ರಂಜಾನ್ ಹಬ್ಬಕ್ಕೆ ಹೊಸ ಬಟ್ಟೆಗಳನ್ನು ಧರಿಸಿ ಪ್ರಾರ್ಥನೆಗೆ ಇದ್ಗಾ ಮೈದಾನಕ್ಕೆ ಆಗಮಿಸಿದ್ದರು. ಧರ್ಮ ಗುರು ಪ್ರಾರ್ಥನೆಯನ್ನು ಭೋದಿಸಿ. ಧರ್ಮದ ಸಾರವನ್ನು ತಿಳಿಸಿದರು.

ಪ್ರಾರ್ಥನೆಯಲ್ಲಿ ಸಂಸದ ಈ ತುಕರಾಂ, ಶಾಸಕ ಭರತ್ ರೆಡ್ಡಿ, ಡಿಸಿಸಿ ಅಧ್ಯಕ್ಷ ಅಲ್ಲಂ ಪ್ರಶಾಂತ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಪಾಲ್ಗೊಂಡು ಮುಸ್ಲಿಂ ಸಮುದಾಯದ ಜನತೆಗೆ ಪರಸ್ಪರ ಶುಭಾಶಯ ಕೋರಿದರು.

# ಸಂಸತ್ತಿನಲ್ಲಿ ಶೇ.50 ರಷ್ಟು ಮಹಿಳಾ ಮೀಸಲಾತಿ ಮಸೂದೆ ಅನುಮೋದಿಸಬೇಕು: ಡಾ. ಜಿ. ಪರಮೇಶ್ವರ

**ತುಮಕೂರು, ಮಾ. 21:** ಸಂಸತ್ತಿನಲ್ಲೂ ಮಹಿಳಾ ಮೀಸಲಾತಿ ಮಸೂದೆ ಅನುಮೋದನೆ ಆಗಬೇಕು. ಇದರಿಂದ ಸಂಸತ್ತು ಮತ್ತು ವಿಧಾನಮಂಡಲದಲ್ಲಿ ಮಹಿಳೆಯರಿಗೆ ಶೇ. 50 ಸ್ಥಾನಗಳ ಅವಕಾಶ ಸಿಗಲಿದೆ ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.
ಈ ಹಿಂದೆ ರಾಜೀವ್ ಗಾಂಧಿ ಅವರು ಪ್ರಧಾನಮಂತ್ರಿ ಆಗಿದ್ದಾಗ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಶೇ. 50 ರಷ್ಟು ಸ್ಥಾನಮಾನಗಳನ್ನು ಕೊಡುವ ನಿಟ್ಟಿನಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತಂದು ಅವಕಾಶಗಳನ್ನು ನೀಡಲಾಯಿತು. ಅದರಿಂದ ಇದೀಗ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಪ್ರಾಧಾನ್ಯತೆ ಸಿಕ್ಕಿದೆ.

ನಂತರ ಡಾ. ಮನಮೋಹನ್ ಸಿಂಗ್ ಅವರು ಪ್ರಧಾನಿ ಇದ್ದಾಗ ಸಂಸತ್ತಿನಲ್ಲೂ ಶೇ. 50 ರಷ್ಟು ಅವಕಾಶ ಕಲ್ಪಿಸುವ ಮಹಿಳಾ ಮಸೂದೆಯನ್ನು ಮಂಡಿಸಲಾಯಿತು. ಆ ದಿನಗಳಲ್ಲಿ ರಾಜ್ಯಸಭೆಯಲ್ಲಿ ಅದು ಅನುಮೋದನೆ ಆಗಲಿಲ್ಲ. ಈಗಲಾದರೂ ಕೇಂದ್ರ ಸರ್ಕಾರ ಈ ಮಸೂದೆಯನ್ನು ಅನುಮೋದಿಸಿ ಮಹಿಳೆಗೆ ಶಕ್ತಿ ನೀಡಬೇಕು ಎಂದರು.
ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಯಾರೂ ಅವಕಾಶಗಳನ್ನು ಕಾದು ಕೂರುವುದು ಸರಿಯಲ್ಲ. ಅವಕಾಶಗಳನ್ನು ಸೃಷ್ಟಿಸಿಕೊಳ್ಳಬೇಕು. ವಿಶೇಷವಾಗಿ ಮಹಿಳೆಯವರು ಅತಿದೊಡ್ಡ ಜವಾಬ್ದಾರಿ ಹೊಂದಿರುತ್ತಾರೆ. ಮನೆಯ ಒಳಗೆ ಮತ್ತು



ಹೊರಗೆ ದುಡಿಯಬೇಕಾಗುತ್ತದೆ. ಈ ನಡುವೆ ತಮ್ಮ ಆರೋಗ್ಯವನ್ನೂ ನೋಡಿಕೊಳ್ಳಬೇಕು ಎಂದರು.
ಹಿರಿಯ ಸಿವಿಲ್ ನ್ಯಾಯಾಧೀಶರಾದ ನೂರುನ್ನಿಸಾ ಅವರು ಮಾತನಾಡಿ, ಮಹಿಳೆ ಪುರುಷರಿಗೆ ಸ್ಪರ್ಧಿಯಾಗುವುದು ಬೇಡ. ಮಹಿಳೆಯೇ ತಮ್ಮ ಆತ್ಮಸಂತೋಷಕ್ಕಾಗಿ ಕೆಲವು ಜವಾಬ್ದಾರಿಗಳನ್ನು ನಿಭಾಯಿಸಬೇಕಿದೆ. ಇಂದಿನ ದಿನಗಳಲ್ಲಿ ಮಹಿಳೆಯರು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಬಲರಾಗಿದ್ದಾರೆ. ಆದರೆ ಆರ್ಥಿಕ ಸ್ವಾವಲಂಬನೆಯನ್ನು ಅನುಭವಿಸುವ ಹಕ್ಕನ್ನು ಜಯಿಸಿಕೊಳ್ಳಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಒ ಬಿ.ವಿ. ಅಶ್ವಿಜ, ಎಸ್.ಪಿ. ಕೆ.ವಿ. ಅಶೋಕ್, ಪಾಲಿಕೆ ಆಯುಕ್ತೆ ಶುಭ ಸಿ., ಶಾರದಾ, ಸೌಮ್ಯ, ಡಾ. ಸಿದ್ದರಾಮಣ್ಣ ಮತ್ತಿತರರು ಉಪಸ್ಥಿತರಿದ್ದರು.

# ಜಲಮಂಡಳಿಯಿಂದ ಬಾಕಿ ಪಾವತಿಗೆ ಓಟಿಎಸ್ ಯೋಜನೆ



**ಬೆಂಗಳೂರು ಮಾ. 21–** ಬೆಂಗಳೂರು ನಾಗರಿಕರಿಗೆ ಜಲಮಂಡಳಿಯು ಯುಗಾದಿ ಉಡುಗೊರೆ ನೀಡಿದ್ದು, ದೀರ್ಘಕಾಲದಿಂದ ನೀರಿನ ಬಿಲ್ ಬಾಕಿ ಉಳಿಸಿಕೊಂಡಿರುವ ಗ್ರಾಹಕರಿಗೆ ಅನುಕೂಲ ಕಲ್ಪಿಸಲು, 'ಒನ್ ಟೈಮ್ ಸೆಟಲ್‌ಮೆಂಟ್' ಯೋಜನೆಯನ್ನು ಬರುವ ಏಪ್ರಿಲ್ ತಿಂಗಳಿನಿಂದ ಜಾರಿಗೊಳಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ.

ಬೆಂಗಳೂರು ನಗರದ ಜನರಿಗೆ ಅನುಕೂಲ ಮಾಡಿಕೊಡಲು ಬಾಕಿ ಉಳಿಸಿಕೊಂಡಿರುವ ಬಿಲ್ ನ ಅಸಲು ಪಾವತಿಸಿದಲ್ಲಿ ಬಡ್ಡಿಯನ್ನು ಮನ್ನಾ ಮಾಡಲಾಗುವುದು ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ
ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯಾಪ್ತಿಯಲ್ಲಿರುವ ಸುಮಾರು 11 ಲಕ್ಷ ನೀರಿನ ಸಂಪರ್ಕಗಳ ಪೈಕಿ, 5.11 ಲಕ್ಷ ಗ್ರಾಹಕರು ಬಿಲ್ ಬಾಕಿ ಉಳಿಸಿಕೊಂಡಿದ್ದಾರೆ. 2026ರ ಫೆಬ್ರವರಿ ಅಂತ್ಯದ ಮಾಹಿತಿಯಂತೆ, ಒಟ್ಟು ಬಾಕಿ ಮೊತ್ತ ರೂ. 851.33 ಕೋಟಿಗಳಾಗಿದ್ದು, ಇದರಲ್ಲಿ ಅಸಲು ಮೊತ್ತ ರೂ. 539.43 ಕೋಟಿ ಹಾಗೂ ಬಡ್ಡಿ ರೂ. 311.90 ಕೋಟಿ ಸೇರಿದೆ.

ಬಾಕಿಯನ್ನು ಸುಲಭವಾಗಿ ಪಾವತಿಸಲು ಹಾಗೂ ಗ್ರಾಹಕರ ಮೇಲಿನ ಆರ್ಥಿಕ ಹೊರೆ ತಗ್ಗಿಸಲು, ಏಪ್ರಿಲ್ 2026 ರಿಂದ ಜೂನ್ 2026 ರವರೆಗೆ (3 ತಿಂಗಳ ಅವಧಿ) ಈ ಓ ಟಿ ಎಸ್ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ ಎಂದು ಡಿಸಿಎಂ ಅವರು ತಿಳಿಸಿದ್ದಾರೆ.
ಶೇ. 100 ರಷ್ಟು ಬಡ್ಡಿ ಮನ್ನಾ:ಈ 3 ತಿಂಗಳ ಯೋಜನೆ ಅವಧಿಯಲ್ಲಿ ಗ್ರಾಹಕರು ತಮ್ಮ ಅಸಲು ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಿದರೆ, ಏಪ್ರಿಲ್ 2026ರವರೆಗೆ ಸಂಗ್ರಹವಾಗಿರುವ ಸಂಪೂರ್ಣ ಬಡ್ಡಿಯನ್ನು (ಶೇ. 100ರಷ್ಟು) ರಿಬೇಟ್ ರೂಪದಲ್ಲಿ ಮನ್ನಾ ಮಾಡಲಾಗುತ್ತದೆ.
ಈ ಯೋಜನೆಯು ಗೃಹ ವಾಣಿಜ್ಯ ಕೈಗಾರಿಕಾ ಸೇರಿದಂತೆ ಬೆಂಗಳೂರು ಜಲ ಮಂಡಳಿ ಯ ಎಲ್ಲ ವರ್ಗದ ಗ್ರಾಹಕರಿಗೂ ಅನ್ವಯವಾಗಲಿದೆ. ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳ ಬಾಕಿಗಳಿಗೂ ಲೆಕ್ಕಪತ್ರ ಸಮನ್ವಯದ ಮೂಲಕ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಗ್ರಾಹಕರಿಗೆ ಮಾಹಿತಿ ಒದಗಿಸುವ ಹಾಗೂ ಪಾವತಿ ಪ್ರಕ್ರಿಯೆಯನ್ನು ಅತ್ಯಂತ ಸರಳಗೊಳಿಸುವ ನಿಟ್ಟಿನಲ್ಲಿ, ಬೆಂಗಳೂರು ಜಲ ಮಂಡಳಿ ವತಿಯಿಂದ ಪ್ರತಿ ಬಾಕಿದಾರರಿಗೆ ಅವರ ಆರ್ ಆರ್ ಸಂಖ್ಯೆ, ಅಸಲು ಮೊತ್ತ, ಮನ್ನಾ ಆಗುವ ಬಡ್ಡಿ ಮೊತ್ತ ಹಾಗೂ ಪಾವತಿಸಬೇಕಾದ ಅಂತಿಮ ಮೊತ್ತದ ವಿವರಗಳನ್ನು ಒದಗಿಸಲಾಗುವುದು. ಗ್ರಾಹಕರು ಬೆಂಗಳೂರು ಜಲ ಮಂಡಳಿ ಕಿಯೋಸ್ಕ್, ಆನ್‌ಲೈನ್ ಪೋರ್ಟಲ್ ಹಾಗೂ ವಿವಿಧ ಡಿಜಿಟಲ್ ಪಾವತಿ ವಿಧಾನಗಳ ಮೂಲಕ ಸುಲಭವಾಗಿ ಹಣ ಪಾವತಿಸಬಹುದು.

"ನಗರದ 5.11 ಲಕ್ಷಕ್ಕೂ ಹೆಚ್ಚು ಗ್ರಾಹಕರಿಗೆ ಆರ್ಥಿಕ ನೆರವು ನೀಡುವ ಹಾಗೂ ಮಂಡಳಿಯ ಆರ್ಥಿಕ ಸ್ಥಿತಿಯನ್ನು ಬಲಪಡಿಸುವ ದ್ವಿಮುಖ ಉದ್ದೇಶದಿಂದ ಈ ಯುಗಾದಿ ಕೊಡುಗೆಯನ್ನು ಜಾರಿಗೊಳಿಸಲಾಗುತ್ತಿದೆ. ಬರೋಬ್ಬರಿ 311 ಕೋಟಿ ರೂ.ಗಳ ಬಡ್ಡಿ ಮನ್ನಾ ಮಾಡುವ ಮೂಲಕ ನಾಗರಿಕರ ಮೇಲಿನ ಹೊರೆಯನ್ನು ಗಣನೀಯವಾಗಿ ಇಳಿಸಲಾಗುತ್ತಿದೆ. ಸಾರ್ವಜನಿಕರು ಮುಂಬರುವ 3 ತಿಂಗಳ ಈ ಸುವರ್ಣಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ.

# ಮೇಲಾಧಿಕಾರಿಯ ಕಿರುಕುಳಕ್ಕೆ ಅಧಿಕಾರಿ ಆತ್ಮಹತ್ಯೆ



**ತುಮಕೂರು/ಪಾವಗಡ, ಮಾ. 21–** ಮೇಲಾಧಿಕಾರಿಯ ಕಿರುಕುಳಕ್ಕೆ ನೊಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯೊಬ್ಬರು ಕಚೇರಿಯಲ್ಲಿ ನೇಣಿಗೆ ಶರಣಾಗಿದ್ದಾರೆ.
ಪಾವಗಡ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ (60) ಅವರು ಕಚೇರಿಯಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಅಧಿಕಾರಿ.
ಕಳೆದ ಮೂರು ವರ್ಷಗಳಿಂದ ಪಾವಗಡ ಸಮಾಜ ಕಲ್ಯಾಣ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದ ಮಲ್ಲಿಕಾರ್ಜುನ್ ಅವರ ಸೇವಾ ಅವಧಿ ಈ ತಿಂಗಳ 31ಕ್ಕೆ ಮುಕ್ತಾಯಗೊಳ್ಳಬೇಕಿತ್ತು. ನಿವೃತ್ತಿಗೆ ಮುನ್ನವೇ ಇಂತಹ ದುರಂತ ಸಂಭವಿಸಿರುವುದು ಎಲ್ಲರಲ್ಲೂ ಆಘಾತ ಮೂಡಿಸಿದೆ.

ಯುಗಾದಿ ಹಬ್ಬದ ಮಾರನೇ ದಿನವಾದ ನಿನ್ನೆ ಕರ್ತವ್ಯಕ್ಕೆ ಹಾಜರಾಗಿದ್ದ ಮಲ್ಲಿಕಾರ್ಜುನ್ ಅವರು ಸಂಜೆವರೆಗೂ ಕಚೇರಿಯಲ್ಲೇ ಇದ್ದರು ಎಂದು ಹೇಳಲಾಗಿದೆ. ಸಂಜೆ ಕಚೇರಿಯ ಎಲ್ಲಾ ಸಿಬ್ಬಂದಿಗಳು ಮನೆಗೆ ತೆರಳಿದ ಬಳಿಕ ಕಚೇರಿಯ ಮೀಟಿಂಗ್ ಹಾಲ್‌ನಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.
ಆತ್ಮಹತ್ಯೆಗೂ ಮುನ್ನ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಅವರು ವಿಡಿಯೋ ಮಾಡಿದ್ದು, ಆ ವಿಡಿಯೋದಲ್ಲಿ ಇಲಾಖೆಯ ಮೇಲಾಧಿಕಾರಿಗಳ ಕಿರುಕಳದಿಂದ ಪ್ರಾಣ ಕಳೆದುಕೊಳ್ಳುತ್ತಿದ್ದೇನೆ ಎಂದು ಹೇಳಿದ್ದಾರೆ ಎನ್ನಲಾಗಿದೆ.
ಮೂಲತಃ ಪಾವಗಡ ತಾಲ್ಲೂಕಿನ ಗುಂಡರ್ಲಹಳ್ಳಿ ಗ್ರಾಮದ ನಿವಾಸಿಯಾಗಿದ್ದ ಮಲ್ಲಿಕಾರ್ಜುನ್ ಅವರ ನಿಧನದಿಂದ ಕುಟುಂಬದಲ್ಲಿ ಆಕ್ರಂದನ ಮುಗಿಲು ಮುಟ್ಟಿದೆ. ಮಗನ ಮುಂದೆ ತಾಯಿ ಬಿಕ್ಕಿ ಬಿಕ್ಕಿ ಅತ್ತ ದೃಶ್ಯಗಳು ಮನಕಲಕುವಂತಿವೆ.

**ಮಲ್ಲಿಕಾರ್ಜುನ್ ಕೊನೆ ಮಾತು:** ಆತ್ಮಹತ್ಯೆಗೆ ಶರಣಾಗುವ ಮುನ್ನ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಅವರು ಮಾಡಿರುವ ವಿಡಿಯೋದಲ್ಲಿ ನಮ್ಮ ತಾಯಿ, ಹೆಂಡತಿ, ಮಕ್ಕಳು ನಮ್ಮ ಇಡೀ ಸಂಸಾರ ನನ್ನನ್ನು ಚೆನ್ನಾಗಿ ನೋಡಿಕೊಂಡಿದೆ. ನನಗೆ ಒಳ್ಳೆಯ ಬೆಲೆ ಕೊಟ್ಟಿದ್ದಾರೆ, ನಾನು ಅವರಿಗೆ ಇನ್ನು ಸಹಾಯ ಮಾಡಬೇಕಿತ್ತು. ಆದರೆ ಅದು ಆಗುತ್ತಿಲ್ಲ.ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಪ್ಪ ನನಗೆ ತೊಂದರೆ ಕೊಟ್ಟಿರುವುದರಿಂದ ನಾನು ಈ ನಿರ್ಧಾರಕ್ಕೆ ಬಂದಿರುವೆ. ಅವರಿಗೆ ದೇವರೇ ಶಿಕ್ಷೆ ನೀಡುತ್ತಾನೆ. ಅವನು ತರ್ಲೆಯಾಗಿರುವುದರಿಂದ ನಮ್ಮ ಕುಟುಂಬದವರು ಏನು ಸೇಡು ತೀರಿಸಿಕೊಳ್ಳುವ ಅವಶ್ಯಕತೆ ಇಲ್ಲ. ಅವನಿಗೆ ದೇವರು, ಕಾನೂನು ಶಿಕ್ಷೆ ಕೊಟ್ಟೆ ಕೊಡುತ್ತದೆ ಎಂದು ಹೇಳಿದ್ದಾರೆ ಎನ್ನಲಾಗಿದೆ.ಘಟನೆಯ ಸುದ್ದಿ ತಿಳಿದ ಕೂಡಲೇ ಪಾವಗಡ ಪೊಲೀಸರು ಸ್ಥಳಕ್ಕೆ ಧಾವಿಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು.
**ಕಿರುಕುಳ ನೀಡಿಲ್ಲ: ಜಂಟಿ ನಿರ್ದೇಶಕ ಕೃಷ್ಣಪ್ಪ ಸ್ಪಷ್ಟನೆ:** ಪಾವಗಡ ಸಮಾಜ ಕಲ್ಯಾಣ ಇಲಾಖೆ ಕಚೇರಿಯಲ್ಲಿ ಆತ್ಮಹತ್ಯೆಗೆ ಶರಣಾಗಿರುವ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನಯ್ಯನವರಿಗೆ ನಾನು ಒಂದು ದಿನವೂ ವೈಯುಕ್ತಿಕವಾಗಿ ತೊಂದರೆ ನೀಡಿಲ್ಲ ಎಂದು ವಿಡಿಯೋ ಹೇಳಿಕೆ ಮೂಲಕ ಸ್ಪಷ್ಟಪಡಿಸಿರುವ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಪ್ಪ ಅವರು, ಬೆಂಗಳೂರು ಕೇಂದ್ರ ಕಚೇರಿಯಿಂದ ಮಲ್ಲಿಕಾರ್ಜುನ್ ರವರು ಇಲಾಖೆಯಲ್ಲಿ ಅಕ್ರಮ ಮಾಡಿದ್ದಾರೆ ಎಂಬ ದೂರು ಅರ್ಜಿಯೊಂದಿಗೆ ಪತ್ರ ಬಂದಿತ್ತು. ಆ ಪತ್ರದ ಆಧಾರದ ಮೇಲೆ ನಾನು ಅವರಿಗೆ ನೋಟಿಸ್ ನೀಡಿದ್ದೆ ಎಂದು ಹೇಳಿದ್ದಾರೆ.ಪಾವಗಡ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಅವರು ಆತ್ಮಹತ್ಯೆಗೂ ಮುನ್ನ ಮಾಡಿರುವ ವಿಡಿಯೋದಲ್ಲಿ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಪ್ಪ ಕಿರುಕುಳ ನೀಡಿರುವುದರಿಂದ ಪ್ರಾಣ ಕಳೆದುಕೊಳ್ಳುತ್ತಿದ್ದೇನೆ ಎಂದು ಹೇಳಿಕೆ ನೀಡಿರುವ ಹಿನ್ನೆಲೆಯಲ್ಲಿ 7 ನಿಮಿಷಗಳ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಜಂಟಿ ನಿರ್ದೇಶಕ ಕೃಷ್ಣಪ್ಪ ಅವರು, ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಅವರ ನಿವೃತ್ತಿಗೆ ಕೇವಲ 10 ದಿನಗಳು ಮಾತ್ರ ಬಾಕಿ ಇತ್ತು. ನಾನು ಒಂದು ದಿನವೂ ಅವರಿಗೆ ಕಿರುಕುಳ ಕೊಟ್ಟಿಲ್ಲ. ನಮ್ಮಿಂದ ತೊಂದರೆಯಾಗಿದ್ದರೆ ಕಚೇರಿಯ ಸಿಬ್ಬಂದಿಗಳು ಖಂಡಿತವಾಗಿಯೂ ಬಹಿರಂಗಪಡಿಸಬಹುದು. ನಮ್ಮ ಇಲಾಖೆಯಲ್ಲಿ ಎಲ್ಲರಿಗೂ ಸಹಕಾರ ಕೊಡುತ್ತಾ ಕುಟುಂಬದ ರೀತಿಯಲ್ಲಿ ಕೆಲಸ ಮಾಡುತ್ತಾ ಬಂದಿದ್ದೇವೆ ಎಂದು ತಿಳಿಸಿದ್ದಾರೆ.
ಮಲ್ಲಿಕಾರ್ಜುನಯ್ಯನವರು ಅಕ್ರಮ ಮಾಡಿದ್ದಾರೆ ಎಂಬ ದೂರು ಅರ್ಜಿಯೊಂದಿಗೆ ಬೆಂಗಳೂರು ಕೇಂದ್ರ ಕಚೇರಿಯಿಂದ ಪತ್ರ ಬಂದಿತ್ತು. ಆ ಪತ್ರದ ಆಧಾರದ ಮೇಲೆ ನಾನು ಅವರಿಗೆ ನೋಟಿಸ್ ಕೊಟ್ಟಿದ್ದು ನಿಜ. ಆ ದೂರಿನ ತನಿಖೆ ನಡೆಸ ಲು ಇಬ್ಬರು ಅಧಿಕಾರಿಗಳನ್ನು ನೇಮಕ ಮಾಡಿದ್ದೆ. ಆದರೆ ಇನ್ನು ತನಿಖೆ ಆರಂಭಿಸಿರಲಿಲ್ಲ. ಇದನ್ನು ಹೊರತುಪಡಿಸಿದರೆ ಯಾವುದೇ ರೀತಿಯ ಮಾನಸಿಕ ಕಿರುಕುಳ ನೀಡುವ ಕೆಲಸವನ್ನು ನಾನು ಮಾಡಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಮಲ್ಲಿಕಾರ್ಜುನ್ ರವರ ನಿವೃತ್ತಿಗೆ ಕೇವಲ 10 ದಿನಗಳು ಮಾತ್ರ ಇರುವುದರಿಂದ ಅವರಿಗೆ ತೊಂದರೆ ಕೊಟ್ಟು ಅವರ ಪಿಂಚಣಿ ನಿಲ್ಲಿಸುವಂತಹ ಅವಕಾಶವೂ ಇರುವುದಿಲ್ಲ. ಇವರ ಪಿಂಚಣಿಗೆ ಸಹಾಯವಾಗುವಂತೆ ತೃಪ್ತಿಕರವಾಗಿ ಪ್ರಸ್ತಾವನೆಯನ್ನು ಸ್ವತಃ ನಾನೇ ದೃಢೀಕರಿಸಿ ಕೊಟ್ಟಿದ್ದೇನೆ. ಇವರ ಆತ್ಮಹತ್ಯೆ ಅನುಮಾನ ಮೂಡಿಸುತ್ತಿದೆ. ಇವರ ಸಾವಿನ ಕುರಿತು ಸತ್ಯಾಸತ್ಯತೆಯನ್ನು ಹೊರಗೆ ತರಬೇಕು ಎಂದು ಮನವಿ ಮಾಡುವುದಾಗಿ ಜಂಟಿ ನಿರ್ದೇಶಕ ಕೃಷ್ಣಪ್ಪ ಬಿಡುಗಡೆ ಮಾಡಿರುವ ವಿಡಿಯೋದಲ್ಲಿ ತಿಳಿಸಿದ್ದಾರೆ.

# ಕೋನಾಪುರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ



**ಬಳ್ಳಾರಿ, ಮಾ.21** ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳ ಟ್ರಸ್ಟ್ (ರಿ) ಬಳ್ಳಾರಿ ವತಿಯಿಂದ ಶುಕ್ರವಾರ ಸಂಜೆ 6.30ಕ್ಕೆ. ಶ್ರೀ ಆಂಜನೇಯಸ್ವಾಮಿ ಆವರಣ, ಬಯಲು ವೇದಿಕೆ, ಕೋನಾಪುರ, ಮೊಳಕಾಲ್ಮೂರು ತಾ, ಚಿತ್ರದುರ್ಗ ಜಿಲ್ಲೆ.( ಯುಗಾದಿ ಚಿಗುರು, ಹಳ್ಳಿ ಪರಂಪರೆ, ಶೀರ್ಷಿಕೆಡಿಯಲ್ಲಿ ) ಸಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ಉದ್ಘಾಟನೆಯನ್ನು, ಶ್ರೀ ಮದ್ದನಪ್ಪ, ಶ್ರೀ ರಾಮಲಿಂಗಪ್ಪ ಮತ್ತು ಊರಿನ ಮುಖಂಡರು ಉದ್ಘಾಟನೆಯನ್ನು ನೆರವೇರಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಮದ್ದನಪ್ಪ ಮಾತನಾಡಿ, ತೊಗಲುಗೊಂಬೆ ಕಲಾ ಸಂಭ್ರಮದ ಮೂಲಕ ತೊಗಲುಗೊಂಬೆ ಮತ್ತು ಕೋಲಾಟ ಕಾರ್ಯಕ್ರಮಗಳನ್ನು ನಮ್ಮ ಊರಿನಲ್ಲಿ ಹಮ್ಮಿಕೊಂಡಿರುವುದು ಶ್ಲಾಘನೀಯ, ಪ್ರಸ್ತುತ ದಿನ ಮಾನಗಳಲ್ಲಿ ತೊಗಲುಗೊಂಬೆ ಆಟ ಅಳುವಿನಂಚಿಗೆ ತಲುಪಿದ್ದು ಈ ಕಲೆಯನ್ನು ಪ್ರತಿಯೊಬ್ಬರು ಪ್ರೋತ್ಸಾಹಿಸಬೇಕು ಎಂದರು. ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳಿಗೆ ತೊಗಲುಗೊಂಬೆ ಆಟದ ಬಗ್ಗೆ ತಿಳುವಳಿಕೆಯೆ ಇಲ್ಲದ ಇಂತಹ ಸಂದರ್ಭದಲ್ಲಿ ತೊಗಲುಗೊಂಬೆ ಆಟ ಪ್ರದರ್ಶನ ನೀಡಿ ಅದರ ಬಗ್ಗೆ ಅರಿವು ಮೂಡಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ರಾಮಲಿಂಗಪ್ಪ ಊರಿನ ಮುಖಂಡರು, ಮಾತನಾಡಿ ತೊಗಲುಗೊಂಬೆ ಆಟ ಪ್ರದರ್ಶನ ಮಾಡಿದರೆ ಊರಿನಲ್ಲಿ ಮಳೆ,ಬೆಳೆ ಆಗುತ್ತದೆ ಎಂಬ ಸಂಪ್ರದಾಯ ಇದೆ. ಅದೇ ರೀತಿ ಈಗ ವೈ.ಪ್ರಭು ಮತ್ತು ಅವರ ಕುಟುಂಬದವರು ತೊಗಲುಗೊಂಬೆ ಆಟವನ್ನು ಇಂದಿಗೂ ಉಳಿಸಿಕೊಂಡು ಬಂದಿದ್ದಾರೆ, ಈ ಕಲೆಗೆ ಪ್ರತಿಯೊಬ್ಬರು ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು. ಕೆ.ಬಿ.ಮಾರೇಣ್ಣ ಊರಿನ ಮುಖಂಡರು, ಸಣ್ಣ ಬೀಮಣ್ಣ, ಊರಿನ ಮುಖಂಡರು. ಸೇರಿದಂತೆ ಮತ್ತಿತರರು ಗ್ರಾಮಸ್ಥರು ಉಪಾಸ್ಥಿತರಿದ್ದರು. ಆರಂಭದಲ್ಲಿ ಟ್ರಸ್ಟಿನ ಅಧ್ಯಕ್ಷರಾದ,ವೈ. ಪ್ರಭು ಪ್ರಾಸ್ತಾವಿಕ ನುಡಿದರು. ನಂತರ ಶ್ರೀ ಹುಲಿಗಮ್ಮ ಮತ್ತು ತಂಡದವರಿಂದ ರಾವಣ ಸಂಹಾರ,ಎಂಬ ತೊಗಲುಗೊಂಬೆ ಪ್ರದರ್ಶನ ನಡೆಯಿತು. ಮತ್ತು ಮಾರೇಣ್ಣ, ಕೋನಾಪುರ ಅವರಿಂದ ಕೋಲಾಟ ಪ್ರದರ್ಶನ ಮಾಡಿ ಜನಮನ್ನಣೆ ಪಡೆದರು. ವೈ. ಉಮೇಶ್ ನಿರೂಪಣೆ ಮತ್ತು ಶ್ರೀಮತಿ ಪಿ.ರೇಖಾ ವಂದನಾರ್ಪಣೆ ಮಾಡಿದರು.

## ನಮ್ಮ ದೇಶ ಭಾವೈಕ್ಯತೆಯ ನೆಲೆವೀಡು : ಡಾ.ಕೆ.ಗಿರಿಮಲ್ಲ



**ಕಲಬುರಗಿ,ಮಾ.21–** ಭಾರತೀಯ ಇತಿಹಾಸ ಮತ್ತು ಪರಂಪರೆಯನ್ನು ಅವಲೋಕಿಸಿದಾಗ ಹಿಂದು ಮತ್ತು ಮುಸ್ಲಿಂ ಧರ್ಮದವರು ಸಹೋದರತೆಯಿಂದ ಬಾಳುವ ಮೂಲಕ ನಮ್ಮ ನಾಡು ಭಾವೈಕ್ಯತೆಯ ನೆಲೆವೀಡಾಗಿಸಿದ್ದು ಭಾರತೀಯರಾದ ನಮಗೆ ಹೆಮ್ಮೆಯ ಸಂಗತಿ ಎಂದು ಸಾಹಿತಿ ಹಾಗೂ ಸರಕಾರಿ ಕಿರಿಯ ತಾಂತ್ರಿಕ ಶಾಲೆಯ ಪ್ರಾಂಶುಪಾಲ ಡಾ ಕೆ ಗಿರಿಮಲ್ಲ ಅಭಿಪ್ರಾಯಪಟ್ಟಿದ್ದಾರೆ.ನಗರದ ಪ್ರೀಯದರ್ಶಿನಿ ಇಂದಿರಾಗಾಂಧಿ ಕೈಗಾರಿಕಾ ತರಬೇತಿ ಕಾಲೇಜಿನಲ್ಲಿ ಶಿವಬಸವ ಸಾಂಸ್ಕೃತಿಕ ಸಂಸ್ಥೆಯಿಂದ ಯುಗಾದಿ ಹಾಗೂ ರಂಜಾನ್ ಹಬ್ಬಗಳ ಪ್ರಯುಕ್ತ ಆಯೋಜಿಸಿದ್ದ "ಭಾವೈಕ್ಯ ಬೇಸುಗೆ ಭಾರತ ವಿಶೇಷ ಭಾವ ಸಮ್ಮಿಲನ" ಕಾರ್ಯಕ್ರಮವನ್ನೂ ಉದ್ಘಾಟಿಸಿ ಅವರು ಮಾತನಾಡಿದರು.
ಖ್ಯಾತ ಚಿತ್ರ ಕಲಾವಿದ ಡಾ ರೇಹಮಾನ ಪಟೇಲ್ ಮಾತನಾಡಿ, ಭಾವೈಕ್ಯತೆ, ಸಹಬಾಳ್ವೆಯು ಸಮಾಜದ ಸುಸ್ಥಿರ ಅಭಿವೃದ್ಧಿಗೆ ಮತ್ತು ರಾಷ್ಟ್ರೀಯ ಏಕತೆಗೆ ಅತ್ಯಂತ ಅವಶ್ಯಕವಾಗಿದೆ ಎಂದು ಹೇಳಿದರು.ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ನದಿಸಿನ್ನೂರಿನ ಮಹಾಲಕ್ಷ್ಮಿ ಗುರುಪೀಠ ಹಾಗೂ ಶರಣ ಹೂಗಾರ ಮಾದಯ್ಯ ಗುರುಪೀಠದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಗುರು ರಾಜೇಂದ್ರ ಶೀವಯೋಗಿಗಳು ವಹಿಸಿದ್ದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ, ಕೃಷಿ ಶ್ರೀ ಪ್ರಶಸ್ತಿ ಪುರಸ್ಕೃತ ಲೇಖಕ, ಪ್ರೋ ಯಶವಂತರಾಯ ಅಷ್ಠಗಿ, ಕವಿ ಖಾಜಾ ಪಟೇಲ್ ಭಂಕುರ, ಸಮಾಜ ಸೇವಕ ರಮೇಶ್ ತೇಗ್ಗಿನಮನಿ, ಮಾತನಾಡಿದರು.ಪ್ರೀಯದರ್ಶಿನಿ ಇಂದಿರಾಗಾಂಧಿ ಕೈಗಾರಿಕಾ ತರಬೇತಿ ಕಾಲೇಜಿನ ಪ್ರಾಂಶುಪಾಲ ಸಿದ್ದಣ್ಣ ಭಾವಿಕಟ್ಟಿ ಅಧ್ಯಕ್ಷತೆ ವಹಿಸಿದ್ದರು.ಶಿವಬಸವ ಸಾಂಸ್ಕೃತಿಕ ಸಂಸ್ಥೆಯ ಕಾರ್ಯದರ್ಶಿ ಹಾಗೂ ಜಾನಪದ ಕಲಾವಿದ ವಿಶ್ವನಾಥ ತೋಟ್ನಳ್ಳಿ ನೀರೂಪಿಸಿದರು.ಸಂಜು ಹಾಗರಗಿ ಸ್ವಾಗತಿಸಿದರು. ನಾಗೇಂದ್ರ ಭಜಂತ್ರಿ ವಂದಿಸಿದರು. ಸಿಬ್ಬಂದಿ ವರ್ಗದ, ದತ್ತಪ್ಪ, ಕಲ್ಲಪ್ಪ, ಕಲಾವಿದ ರಾಮು ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ..ಹಿಂದೂ–ಮುಸ್ಲಿಂ ಭಾವೈಕ್ಯತೆಯು ಭಾರತದ ಸಾಂಸ್ಕೃತಿಕ ಪರಂಪರೆಯ ಭಾಗವಾಗಿದ್ದು, ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸೌಹಾರ್ದತೆಯಿಂದ ಬದುಕುವುದು ಇದರ ಮೂಲ ತತ್ವವಾಗಿದೆ. ಪ್ರೋ.ಯಶವಂತರಾಯ ಅಷ್ಠಗಿ –ಕೃಷಿ ಶ್ರೀ ಪ್ರಶಸ್ತಿ ಪುರಸ್ಕೃತ ಲೇಖಕರು, ಕಲಬುರಗಿ

# ಗಂಡು- ಹೆಣ್ಣಿನ ನಡುವೆ ಭೇದ ಭಾವನೆ ಬೇಡ: ಡಾ.ಶಿವಪ್ರಕಾಶ್

**ಮಂಗಳೂರು:** ಲಿಂಗಾನುಪಾತ ಹದಗೆಡಲು ವರದಕ್ಷಿಣೆ ಎಂಬ ಸಾಮಾಜಿಕ ಪಿಡುಗು ಮುಖ್ಯವಾಗಿ ಕಾರಣವಾಗುತ್ತಿದ್ದು, ಈ ಪಿಡುಗನ್ನು ಹೋಗಲಾಡಿಸಬೇಕು. ಸಮಾಜದಲ್ಲಿ ಗಂಡು ಶ್ರೇಷ್ಠ, ಹೆಣ್ಣು ತಾತ್ಸಾರ ಎಂಬ ಭೇದ ತೋರದೆ ಸಮಾನತೆಯನ್ನು ಕಾಯ್ದುಕೊಳ್ಳಬೇಕು ಎಂದು ವೆನ್ಲಾಕ್ ಆಸ್ಪತ್ರೆ ಅಧೀಕ್ಷಕ ಡಾ.ಶಿವಪ್ರಕಾಶ್ ಹೇಳಿದ್ದಾರೆ.

ನಗರದ ಜಿಲ್ಲಾ ಪಂಚಾಯ್ತಿ ನೇತ್ರಾವತಿ ಸಭಾಂಗಣದಲ್ಲಿ ಮಂಗಳವಾರ ದಕ್ಷಿಣ ಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧ ಕಾಯ್ದೆ-1994 ಕುರಿತು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.ಹೆಣ್ಣು ಮಗು ಹುಟ್ಟಿದರೆ ಶಿಕ್ಷಣ, ವರದಕ್ಷಿಣೆ ಹಾಗೂ ವಿವಾಹ ವೆಚ್ಚ ಭರಿಸಬೇಕಾಗುತ್ತದೆ ಎಂಬ ಕಾರಣದಿಂದ ಕುಟುಂಬಕ್ಕೆ ಹೊರೆ ಎಂದು ಭಾವಿಸಿಕೊಂಡ ಮನಸ್ಥಿತಿಯನ್ನು ಬದಲಾಯಿಸಿಕೊಳ್ಳಬೇಕು. ಹೆಣ್ಣಿನ ಮೇಲಿರುವ ತಾತ್ಸಾರ ಭಾವನೆಯನ್ನು ದೂರ ಮಾಡಬೇಕು ಎಂದು ಅವರು ಹೇಳಿದರು.

ಬಾಲ್ಯ ವಿವಾಹ ಪದ್ಧತಿಯಿಂದಾಗಿ ಚಿಕ್ಕ ವಯಸ್ಸಿನಲ್ಲಿ ಹೆಣ್ಣು ಗರ್ಭಿಣಿಯಾಗಿ ಹೆರಿಗೆ ಸಂದರ್ಭದಲ್ಲಿ ಸಾವಿಗೀಡಾಗುವ ಸಾಧ್ಯತೆಗಳಿಂದ ಹಾಗೂ ಹೆಣ್ಣು ಮಕ್ಕಳಿಗಿರುವ ಕಡಿಮೆ ಸಾಮಾಜಿಕ ಸ್ಥಾನಮಾನ, ಗಂಡು ಮಗು ಬೇಕೆನ್ನುವ ಹಂಬಲ ಹಾಗೂ ಮೂಢನಂಬಿಕೆಗಳಿಂದ ವೈದ್ಯಕೀಯ ತಂತ್ರಜ್ಞಾನಗಳ ಮೂಲಕ ಭ್ರೂಣ ಲಿಂಗ ಪತ್ತೆ ಹಚ್ಚಿ ಹೆಣ್ಣು ಶಿಶುಗಳ ಹತ್ಯೆ ಮಾಡುವುದರಿಂದ ಮಹಿಳೆಯರ ಸಂಖ್ಯೆ ಇಳಿಮುಖವಾಗುತ್ತಿದೆ ಎಂದು ಡಾ.ಶಿವಪ್ರಕಾಶ್ ಕಳವಳ ವ್ಯಕ್ತಪಡಿಸಿದರು.ಮಹಿಳೆಯರ ಮತ್ತು ಪುರುಷರ ಅನುಪಾತದ ಅಸಮತೋಲನ ಸಾಮಾಜಿಕ ಪರಿಣಾಮಗಳನ್ನು ಉಂಟುಮಾಡುತ್ತದೆ. ಆದ್ದರಿಂದ ಬಾಲ್ಯವಿವಾಹ, ವರದಕ್ಷಿಣೆಯಂತಹ ಸಾಮಾಜಿಕ ಪಿಡುಗುಗಳಿಂದ ಹೆಣ್ಣು ಮಕ್ಕಳಿಗೆ ರಕ್ಷಣೆ ನೀಡಬೇಕು. ಗಂಡು ಮಕ್ಕಳಿಗೆ ನೀಡುವಷ್ಟೇ ಸಮಾನ ಅವಕಾಶವನ್ನು ಹೆಣ್ಣು ಮಕ್ಕಳಿಗೂ ನೀಡಬೇಕು ಎಂದರು.

ಉಲ್ಲಂಘಿಸಿದರೆ ನಿರ್ದಾಕ್ಷಿಣ್ಯ ಕ್ರಮ:
ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಚ್.ಆರ್. ತಿಮ್ಮಯ್ಯ ಮಾತನಾಡಿ, ಸ್ಕ್ಯಾನಿಂಗ್ ಸೆಂಟರ್‌ಗಳು ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧ



ಕಾಯ್ದೆಯನ್ವಯ ಕಾನೂನು, ಮಾರ್ಗಸೂಚಿ, ದಾಖಲಾತಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕಾನೂನಿನ ಉಲ್ಲಂಘನೆಗೆ ಯಾವುದೇ ರಿಯಾಯಿತಿ ಇರುವುದಿಲ್ಲ. ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಉಲ್ಲಂಘನೆ ಕಂಡುಬಂದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.
ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ ಕ್ಷೇಮ ಕೆ.ಎಸ್. ಹೆಗ್ಡೆ ಆಸ್ಪತ್ರೆಯ ರೇಡಿಯಾಲಜಿಸ್ಟ್ ಡಾ.ರಘುರಾಜ್ ಅವರು ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆಯ ಕುರಿತು ಹಾಗೂ ಎ.ಜೆ ಮೆಡಿಕಲ್ ಕಾಲೇಜು ಆಸ್ಪತ್ರೆಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞೆ ಡಾ.ಅಮೃತಾ ಭಂಡಾರಿ ಅವರು ಎಂ.ಟಿ.ಪಿ (ಮೆಡಿಕಲ್ ಟರ್ಮಿನೇಷನ್ ಆಫ್ ಪ್ರೆಗ್ನೆನ್ಸಿ) ಕಾಯ್ದೆಯ ಕುರಿತು ಮಾಹಿತಿ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಉಸ್ಮಾನ್ ಎ., ಐಆರ್‌ಐಎ ಅಧ್ಯಕ್ಷ ಡಾ.ಪ್ರವೀಣ್ ಜೆ.ಜಾನ್, ಐಎಂಎ ಅಧ್ಯಕ್ಷ ಡಾ.ಸದಾನಂದ ಪೂಜಾರಿ, ಎಫ್‌ಒಜಿಎಸ್‌ಐ ಅಧ್ಯಕ್ಷ ಡಾ.ಪ್ರದೀಪ್ ಗಾಣಿಗ ಮತ್ತಿತರರು ಇದ್ದರು.ಜಿಲ್ಲಾ ಅನುಷ್ಠಾನ ಅಧಿಕಾರಿ ಡಾ.ದೀಪಾ ಪ್ರಭು ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜ್ಯೋತಿ ಕೆ ಉಳೆಪಾಡಿ ನಿರೂಪಿಸಿದರು.

## ಅಮ್ರಾಯಿ ಜಾನುವಾರು ಜಾತ್ರೆ ನಿಮಿತ್ಯ ಜೋಡೆತ್ತಿನ ಸ್ಪರ್ಧೆ



**ಜಮಖಂಡಿ:ಮಾ.21:** ನಗರದ ಅಮ್ರಾಯಿ ಜಾನುವಾರು ಜಾತ್ರೆಯು ಪ್ರತಿ ವರ್ಷದಂತೆ ಈ ವರ್ಷವೂ ಮೂರು ದಿನಗಳ ಕಾಲ ಭಕ್ತಿಭಾವ ಮತ್ತು ಸಂಭ್ರಮದಿಂದ ನೆರವೇರಿತು ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು

ನಗರದ ಜಂಬಗಿ ರಸ್ತೆಯಲ್ಲಿ ಜರುಗಿದ ಅಮರಾಯಿ ಜಾತ್ರಾ ನಿಮಿತ್ಯವಾಗಿ ತೆರಬಂಡೆ ಸ್ಪರ್ದೆಯಲ್ಲಿ ಭಾಗಿಯಾಗಿ ವಿಜೇತರಿಗೆ ಭವುಮಾನ ವಿತರಿಸಿ ಅವರು ಮಾತನಾಡಿ ಜಾತ್ರೆಯ ಕೊನೆಯ ದಿನವಾದ ಇಂದು ತೆರಬಂಡಿ ರೇಸ್ ವಿಶೇಷ ಆಕರ್ಷಣೆಯಾಗಿದ್ದು, ಸಾವಿರಾರು ಜನರು ಅದನ್ನು ಕಣ್ತುಂಬಿಕೊಂಡರು.
ಈ ಜಾತ್ರೆಯನ್ನು ಜಮಖಂಡಿ ಪ್ರದೇಶದ ಎಲ್ಲ ಹಿರಿಯರು ಒಗ್ಗಟ್ಟಿನಿಂದ ಪ್ರತಿವರ್ಷ ಯಶಸ್ವಿಯಾಗಿ ಆಯೋಜಿಸುತ್ತಿದ್ದು, ವಿಶೇಷವಾಗಿ ಜೋಡೆತ್ತುಗಳ ರೇಸ್‌ಗೆ ಹೆಚ್ಚು ಮಹತ್ವ ನೀಡಲಾಗುತ್ತದೆ. ಇತರ ಕೆಲ ಜಾತ್ರೆಗಳಲ್ಲಿ ಕಾಣಸಿಗುವಂತೆ ಜಾನುವಾರುಗಳಿಗೆ ಹಿಂಸೆ ನೀಡುವುದು, ಬ್ಯಾಟರಿ ಬಳಸುವುದು ಅಥವಾ ಹಿಂಸಾತ್ಮಕ ರೀತಿಯಲ್ಲಿ ಓಡಿಸುವಂತಹ ಘಟನೆಗಳು ಇಲ್ಲಿ ಕಂಡುಬಂದಿಲ್ಲ. ಜಾತ್ರೆಯನ್ನು ಸಂಪೂರ್ಣ ಪಾರದರ್ಶಕ ಹಾಗೂ ಜಾನುವಾರುಗಳ ಕಲ್ಯಾಣವನ್ನು ಗಮನದಲ್ಲಿಟ್ಟುಕೊಂಡು ನಡೆಸಲಾಗಿದೆ.
ಇದೇ ಜಾತ್ರೆಯು ರೈತರಿಗೆ ಸಹ ಬಹಳ ಉಪಯುಕ್ತವಾಗಿದ್ದು, ವಿವಿಧ ಜಾನುವಾರುಗಳಾದ ಎತ್ತುಗಳು, ಆಕಳುಗಳು, ಎಮ್ಮೆಗಳು ಸೇರಿದಂತೆ ಕೃಷಿಗೆ ಅಗತ್ಯವಿರುವ ಜಾನುವಾರುಗಳ ಖರೀದಿ-ಮಾರಾಟ ಇಲ್ಲಿ ನಡೆಯುತ್ತದೆ.

ಈ ಮಹತ್ವದ ಜಾತ್ರೆಯನ್ನು ಯಶಸ್ವಿಯಾಗಿ ನಡೆಸಲು ಪರೋಕ್ಷ ಹಾಗೂ ಅಪರೋಕ್ಷವಾಗಿ ಸಹಕಾರ ನೀಡಿದ ಎಲ್ಲರಿಗೂ ಸಮಾರೋಪ ಸಮಾರಂಭದಲ್ಲಿ ಕೃತಜ್ಞತೆ ಸಲ್ಲಿಸಿದರು.

ಅಮರಾಯಿ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ನಂದ್ಯಪ್ಪ ರಾಮಪ್ಪ ನ್ಯಾಮಗೌಡ ಅವರ ನೇತೃತ್ವದಲ್ಲಿ ಜಾತ್ರೆ ಯಶಸ್ವಿಯಾಗಿ ನಡೆಯಿತು. ಉಪಾಧ್ಯಕ್ಷರಾದ ಸಚಿನ್ ತುಪ್ಪದ, ಸಿದ್ರಾಮ ಜಂಬಗಿ, ಕೆ.ಕೆ. ತುಪ್ಪದ, ರೇವಣೆಪ್ಪ ತೆಲಬಕ್ಕನ್ನವರ, ನಂದ್ಯಪ್ಪ ಹಿಪ್ಪರಗಿ, ಫಕೀರಸಾಬ ಬಾಗವಾನ, ಮಲ್ಲಿಕಾರ್ಜುನ ಲಿಂಗನೂರ, ಮಲ್ಲಪ್ಪ ಉಳ್ಳಾಗಡ್ಡಿ, ಸಿದ್ದಯ್ಯಾ ಕಲಕತ್ತಿಮಠ, ಮಹಾದೇವ ತೆಲಬಕ್ಕನ್ನವರ, ನಂದ್ಯಪ್ಪ ನ್ಯಾಮಗೌಡ, ಕುಮಾರ ಆಲಗೂರ, ಸಿವು ತೆಲಬಕ್ಕನ್ನವರ, ಲೋಕೇಶ್ ನ್ಯಾಮಗೌಡ ಸೇರಿದಂತೆ ಸಮಿತಿಯ ಸದಸ್ಯರು ಸಕ್ರಿಯವಾಗಿ ಸಹಕರಿಸಿದರು. ಕಾರ್ಯಕ್ರಮವನ್ನು ಮಲ್ಲು ಹೇಸಮನಿ ಅವರು ನಿರೂಪಿಸಿದರು.

ಯುಗಾದಿ ಹಾಗೂ ರಮಝಾನ್ ಹಬ್ಬದ ಶುಭಾಶಯ ಸಂದೇಶ ಸಂದರ್ಭದಲ್ಲಿ ಯುಗಾದಿ ಹಬ್ಬ ನಮ್ಮೆಲ್ಲರಿಗೂ ಹೊಸ ವರ್ಷದ ಆರಂಭವಾಗಿದೆ. ಈ ಹೊಸ ವರ್ಷವು ನಾಡಿನ ಜನತೆಗೆ ಭಗವಂತನು ಆಯುರು ಆರೋಗ್ಯ, ಆಯುಷ್ಯ, ಸುಖ, ಶಾಂತಿ ಹಾಗೂ ನೆಮ್ಮದಿಯನ್ನು ಕರುಣಿಸಲಿ ಎಂದು ನಾನು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ. ಈ ಶುಭ ಸಂದರ್ಭದಲ್ಲಿ ನಾಡಿನ ಎಲ್ಲಾ ಜನತೆಗೆ ಯುಗಾದಿ ಹಬ್ಬದ ಹಾರ್ದಿಕ ಶುಭಾಶಯಗಳನ್ನು ತಿಳಿಸುತ್ತೇನೆ.
ಇದರ ಜೊತೆಗೆ ನಮ್ಮ ಅಲ್ಪಸಂಖ್ಯಾತ ಬಂಧುಗಳಾದ ಮುಸ್ಲಿಂ ಸಹೋದರರು ಪವಿತ್ರ ರಮಝಾನ್ ಮಾಸವನ್ನು ಆಚರಿಸುತ್ತಿದ್ದಾರೆ. ಈ ಪವಿತ್ರ ತಿಂಗಳಲ್ಲಿ ಅವರು ಉಪವಾಸ ಆಚರಿಸಿ ಭಕ್ತಿಯಿಂದ ಪ್ರಾರ್ಥನೆ ಸಲ್ಲಿಸುತ್ತಿದ್ದು, ನಾಳೆ ರಮಝಾನ್ ಹಬ್ಬದ ಸಮಾರೋಪವನ್ನು ಆಚರಿಸಲಿದ್ದಾರೆ. ಅವರ ಪ್ರಾರ್ಥನೆಗಳು ಕೂಡ ನಾಡಿನ ಸಮಸ್ತ ಜನತೆಗೆ ಒಳಿತಾಗಲಿ ಎಂಬ ಆಶಯವನ್ನು ಹೊಂದಿವೆ.
ಅದರ ಹಿನ್ನೆಲೆ ನಮ್ಮ ಮುಸ್ಲಿಂ ಬಂಧುಗಳಿಗೆ ಸಹ ರಮಝಾನ್ ಹಬ್ಬದ ಹಾರ್ದಿಕ ಶುಭಾಶಯಗಳನ್ನು ತಿಳಿಸುತ್ತೇನೆ.
ಎಲ್ಲರ ಜೀವನದಲ್ಲಿ ಸಂತೋಷ, ಸೌಹಾರ್ದತೆ ಮತ್ತು ಶಾಂತಿ ಸದಾ ನೆಲೆಸಿರಲಿ ಎಂದು ಹಾರೈಸುತ್ತೇನೆ.

## ವಾಣಿಜ್ಯ ಗ್ಯಾಸ್ ಅಭಾವ: ಸೌದೆ ಒಲೆ ಮೊರೆ ಹೋದ ಹೋಟೆಲ್‌ಗಳು: ಯಾದಗಿರಿ ನಗರದಲ್ಲಿ ಸಂಕಷ್ಟ ಗಂಭೀರ

**ಯಾದಗಿರಿ:ಮಾ.21:** ನಗರದಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಅಭಾವ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದ್ದು, ಇದರ ನೇರ ಪರಿಣಾಮವಾಗಿ ಹೋಟೆಲ್, ಪಿಜಿ ಮತ್ತು ಮೆಸ್‌ಗಳು ಗಂಭೀರ ಸಂಕಷ್ಟಕ್ಕೆ ಸಿಲುಕಿವೆ. ವಿಶೇಷವಾಗಿ ಶಿರಡಿ ಸಾಯಿ ಹೋಟೆಲ್ ಸೇರಿದಂತೆ ಹಲವು ವಾಣಿಜ್ಯ ಸಂಸ್ಥೆಗಳು ಗ್ಯಾಸ್ ಸಿಗದೆ ಪರದಾಡುತ್ತಿದ್ದು, ಪರ್ಯಾಯವಾಗಿ ಸೌದೆ (ಮರದ ಇಂಧನ) ಒಲೆಗಳಿಗೆ ಮೊರೆ ಹೋಗಿರುವುದು ಗಮನಾರ್ಹವಾಗಿದೆ.



ಗ್ಯಾಸ್ ಸರಬರಾಜಿನಲ್ಲಿ ಉಂಟಾದ ವ್ಯತ್ಯಯದಿಂದ ದೈನಂದಿನ ಅಡುಗೆ ಕಾರ್ಯಗಳಲ್ಲಿ ಅಸ್ತವ್ಯಸ್ತತೆ ಉಂಟಾಗಿದ್ದು, ಹೋಟೆಲ್ ಉದ್ಯಮಿಗಳು ಕಂಗಾಲಾಗಿದ್ದಾರೆ. ಸೌದೆ ಒಲೆಯಲ್ಲಿ ಅಡುಗೆ ತಯಾರಿಸುವುದು ಸಮಯಪ್ರಮಾಣದಲ್ಲಿ ಹಾಗೂ ಕಾರ್ಯಕ್ಷಮತೆಯಲ್ಲಿ ಕಡಿಮೆಯಾಗಿರುವುದರಿಂದ, ಅನೇಕ ಹೋಟೆಲ್‌ಗಳು ತಮ್ಮ ಮೆನು ಪಟ್ಟಿಯಲ್ಲಿ ಭಾರಿ ಪ್ರಮಾಣದ ಕಡಿತ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಗ್ರಾಹಕರಿಗೂ ಅಸೌಕರ್ಯ ಉಂಟಾಗಿದೆ.

ಇದೇ ವೇಳೆ, ಸೌದೆಗೆ ಬೇಡಿಕೆ ಅತಿಯಾದ ಮಟ್ಟದಲ್ಲಿ ಏರಿಕೆಯಾಗಿದ್ದು, ಮಾರಾಟಗಾರರ ಸಂಖ್ಯೆ ಕಡಿಮೆಯಾಗಿರುವ ಕಾರಣ ಬೆಲೆಗಳು ಏರಿಕೆಯಾಗುವ ಸಾಧ್ಯತೆ ಹೆಚ್ಚಿದೆ. ಇಂಧನ ಬಿಕ್ಕಟ್ಟು ವ್ಯಾಪಾರ ಕ್ಷೇತ್ರದಲ್ಲಿ ಹೊಸ ಸವಾಲುಗಳನ್ನು ಉಂಟುಮಾಡಿದೆ.

ಮತ್ತೊಂದೆಡೆ, ಸೌದೆ ಒಲೆಗಳಲ್ಲಿ ಅಡುಗೆ ಮಾಡಲು ಹೆಚ್ಚಿನ ಕಾರ್ಮಿಕರ ಅವಶ್ಯಕತೆ ಇರುವುದರಿಂದ, ಕಾರ್ಮಿಕರ ಕೊರತೆ ಸಮಸ್ಯೆಯೂ ತಲೆದೋರಿದೆ. ಹೆಚ್ಚಿದ ಶ್ರಮ, ಸಮಯ ಹಾಗೂ ವೆಚ್ಚದಿಂದಾಗಿ ಹೋಟೆಲ್ ಮಾಲೀಕರು ಆರ್ಥಿಕ ಒತ್ತಡಕ್ಕೆ ಒಳಗಾಗುತ್ತಿದ್ದಾರೆ.

ಒಟ್ಟಾರೆ, ವಾಣಿಜ್ಯ ಗ್ಯಾಸ್ ಅಭಾವವು ಯಾದಗಿರಿ ನಗರದ ಹೋಟೆಲ್ ಉದ್ಯಮದ ಮೇಲೆ ಭಾರೀ ಪರಿಣಾಮ ಬೀರಿದ್ದು, ಸಂಬಂಧಿತ ಇಲಾಖೆ ತಕ್ಷಣ ಕ್ರಮ ಕೈಗೊಂಡು ಗ್ಯಾಸ್ ಸರಬರಾಜನ್ನು ಸುಗಮಗೊಳಿಸಬೇಕು ಎಂಬುದು ಉದ್ಯಮಿಗಳ ಆಗ್ರಹವಾಗಿದೆ.

## ಜನಜಾಗೃತಿ ಮೂಡಿಸಲು ಕ್ರಮವಹಿಸಿ: ಜಿಲ್ಲಾಧಿಕಾರಿ



**ಧಾರವಾಡ,ಮಾ.21:** ಕಳೆದ 11 ವರ್ಗಳ ನಂತರ ಇದೇ ಮೊದಲ ಬಾರಿಗೆ ಮಾರ್ಚ್ ತಿಂಗಳಲ್ಲಿ ಅನಿರೀಕ್ಷಿತವಾಗಿ ಆಲಿಕಲ್ಲು ಮಳೆ ಆಗಿದ್ದು, ಇದರಿಂದ ಕಲಘಟಗಿ, ಹುಬ್ಬಳ್ಳಿ, ನವಲಗುಂದ ತಾಲೂಕಿನಲ್ಲಿ ಜಾನುವಾರು, ಮನೆ ಮತ್ತು ಬೆಳೆ ಹಾನಿ ಆಗಿರುವ ವರದಿಯಾಗಿದೆ. ಸಂಬಂಧಿಸಿದ ತಾಲೂಕುಗಳ ಅಧಿಕಾರಿಗಳು ಪಾರದರ್ಶಕವಾಗಿ ಜಂಟಿ ಸಮೀಕ್ಷೆ ಮಾಡಿ, ವರದಿ ಸಲ್ಲಿಸಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಸೂಚಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಡಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಖುದ್ದಾಗಿ ಹಾಗೂ ಎಲ್ಲಾ ತಾಲೂಕುಗಳ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ತುರ್ತು ಸಭೆ ಜರುಗಿಸಿ, ಅಧ್ಯಕ್ಷವಹಿಸಿ ಮಾತನಾಡಿದರು.

ಕಳೆದ 2015ರ ಮಾರ್ಚ್ದಲ್ಲಿ ಅನಿರೀಕ್ಷಿತ ಮಳೆಯಾಗಿತ್ತು. ಈಗ 11 ವರ್ಗಳ ನಂತರ ಮಾರ್ಚ್ ತಿಂಗಳಲ್ಲಿ ಮಳೆ ಆಗಿದೆ. ಆಲಿಕಲ್ಲು ಮಳೆಯಿಂದ ವಿಶೇ?ವಾಗಿ ಕಲಘಟಗಿ ತಾಲೂಕಿನ ಮಾಚಾಪುರ ಗ್ರಾಮ ಸುತ್ತಮುತ್ತ ಸುಮಾರು 5 ರಿಂದ 8 ಕಿ.ಮೀ ವ್ಯಾಪ್ತಿಯಲ್ಲಿ ಮನೆ, ಜಾನುವಾರ ಮತ್ತು ಬೆಳೆ ಹಾನಿ ಆಗಿರುವ ವರದಿಯಾಗಿದೆ. ಈಗಾಗಲೇ ಸ್ಥಳೀಯ ಅಧಿಕಾರಿಗಳಿಗೆ ನೀಡಿದ ಸೂಚನೆಯಂತೆ ಸ್ಥಳ ಭೇಟಿ ನೀಡಿ ಅಧಿಕಾರಿಗಳು ಹಾನಿ ಪ್ರದೇಶ ಅಂದಾಜಿಸಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಬೆಳೆ ಹಾನಿ ಹಾಗೂ ಮನೆ ಹಾನಿ ಕುರಿತು ಕಂದಾಯ, ಕೃಷಿ, ತೋಟಗಾರಿಕೆ, ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳು ಜಂಟಿ ಸಮೀಕ್ಷೆ ಕೈಗೊಳ್ಳಬೇಕು. ರೈತರಿಂದ ಅಥವಾ ಫಲಾನುಭವಿಗಳಿಂದ ಯಾವುದೇ ರೀತಿಯಲ್ಲಿ ದೂರು ಬರದಂತೆ ಎಚ್ಚರಿಕೆಯಿಂದ, ಪಾರದರ್ಶಕವಾಗಿ ಸಮೀಕ್ಷೆ ಕೈಗೊಳ್ಳಬೇಕೆಂದು ಅವರು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಕಲಘಟಗಿಯಲ್ಲಿ ಅಂದಾಜು 205 ಎಕರೆ ಮಾವು ಸೇರಿದಂತೆ ಸುಮಾರು 450 ಎಕರೆ ಪ್ರದೇಶದಲ್ಲಿ ಮಾವು, ಬಾಳೆ, ತರಕಾರಿ ಬೆಳೆಗಳಿಗೆ ಹಾನಿ ಆಗಿದೆ ಎಂದು ಕಲಘಟಗಿ ತಹಸಿಲ್ದಾರ್ ಮಾಹಿತಿ ನೀಡಿದ್ದಾರೆ. ಆದು ಬೇಗ ಜಂಟಿ ಸಮೀಕ್ಷೆ ಮಾಡಿ, ನಿಖರವಾದ ವರದಿ ಸಲ್ಲಿಸಬೇಕು. ಹವಾಮಾನ ಆಧಾರಿತ ಬೆಳೆ ವಿಮೆ ಮಾಡಿರುವ ರೈತರಿಗೆ ಪರಿಹಾರ ದೊರಕುವಂತೆ ಮಾಡಲು ವಿಮಾ ಕಂಪನಿ ಪ್ರತಿನಿಧಿಗಳಿಗೆ ಸೂಚನೆ ನೀಡಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.
ಮಾರ್ಚ್ 20 ಮತ್ತು 21 ರಂದು ಸಹ ಜಿಲ್ಲೆಯಲ್ಲಿ ಮಳೆ, ಗುಡುಗು, ಸಿಡಿಲು, ಮಿಂಚು ಬರುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಎಲ್ಲ ಹಂತದ ಅಧಿಕಾರಿಗಳು ಈ ಕುರಿತು ಮುನ್ನೆಚ್ಚರಿಕೆ ವಹಿಸಬೇಕೆಂದು ಅವರು ತಿಳಿಸಿದರು.
**ಅಧಿಕಾರಿಗಳು ಮೊಬೈಲ್ ಸ್ವಿಚ್ ಆಫ್ ಮಾಡಬಾರದು:** ಜಿಲ್ಲಾ ಮಟ್ಟ, ತಾಲೂಕು ಮಟ್ಟ ಹಾಗೂ ಹೋಬಳಿ ಮತ್ತು ಗ್ರಾಮ ಮಟ್ಟದ ಎಲ್ಲ ಹಂತದ ವಿವಿಧ ಇಲಾಖೆಗಳ ಸರಕಾರಿ ಅಧಿಕಾರಿ, ಸಿಬ್ಬಂದಿಗಳು ತಮ್ಮ ಮೊಬೈಲ್ ಬಂದ ಇಡಬಾರದು. ವಿಶೇವಾಗಿ ರಾತ್ರಿ ವೇಳೆ ಸ್ವಿಚ್ ಆಫ್ ಮಾಡಬಾರದು. ಅಕಾಲಿಕ ಮಳೆ ಅಥವಾ ಇತರ ತೊಂದರೆಗಳಿಗಾಗಿ ಸಾರ್ವಜನಿಕರು ತುರ್ತಾಗಿ ಸಂಪರ್ಕಿಸುವ ಸಾಧ್ಯತೆ ಇರುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ತಾವೇ ಸ್ವತ: ರ್‍ಯಾಂಡಮ್ ಆಗಿ ಅಧಿಕಾರಿಗಳಿಗೆ ಅನಿರೀಕ್ಷಿತ ಮೊಬೈಲ್ ಕರೆ ಮಾಡಿ, ಪರೀಕ್ಷಿಸುತ್ತೇನೆ. ಕರೆ ಸ್ವೀಕರಿಸದಿದ್ದಲ್ಲಿ ಅಥವಾ ಸ್ವಿಚ್ ಆಫ್ ಇದ್ದಲ್ಲಿ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ಸಭೆಯಲ್ಲಿ ಅಧಿಕಾರಿಗಳಿಗೆ ಎಚ್ಚರಿಸಿದ್ದರು.

**ಜಾನುವಾರುಗಳ ಜೀವ ಹಾನಿ:** 2026, ಮಾರ್ಚ್ ತಿಂಗಳಲ್ಲಿ ಅಕಾಲಿಕ ಮಳೆ ಹಾಗೂ ಸಿಡಿಲು ಬಡಿದಿದ್ದರಿಂದ ಧಾರವಾಡ ತಾಲೂಕಿನ ಹಳೆತೆಗೂರು ಗ್ರಾಮದಲ್ಲಿ ಒಂದು ಎಮ್ಮೆ, ನವಲಗುಂದ ತಾಲೂಕಿನ ದಾಟ್ನಾಳ ಗ್ರಾಮದಲ್ಲಿ ಒಂದು ಎಮ್ಮೆ, ಹುಬ್ಬಳ್ಳಿ ತಾಲೂಕಿನ ಗೋಕುಲ್ ಗ್ರಾಮದಲ್ಲಿ ಒಂದು ಕುದುರೆ, ಕಲಘಟಗಿ ತಾಲೂಕಿನ ಮಾಚಾಪುರ ಗ್ರಾಮದಲ್ಲಿ ಆಲಿಕಲ್ಲು ಮಳೆಯಿಂದಾಗಿ ಎರಡು ಕರುಗಳು ಸಾವನ್ನಪ್ಪಿವೆ.
ಮತ್ತು ನವಲಗುಂದ ತಾಲೂಕಿನ ತಿರ್ಲಾಪುರ ಗ್ರಾಮದಲ್ಲಿ ಭಾರೀ ಮಳೆಯಿಂದಾಗಿ ಮೇಕೆಗಳು ಮತ್ತು ಕುರಿಗಳು ಸೇರಿ 32 ಸಣ್ಣ ಪ್ರಾಣಿಗಳ ಜೀವ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಗಳು ತಿಳಿಸಿದರು.

**ಖಾಸಗಿ ಕೊಳವೆ ಭಾವಿಯಿಂದ ನೀರು ಸರಬರಾಜು :** ಧಾರವಾಡ ತಾಲೂಕಿನ ಹೊಸಟ್ಟಿ, ಮಂಡಿಹಾಳ, ಬೇಲೂರು, ಮುಗದ ಗ್ರಾಮಗಳಲ್ಲಿ ಹಾಗೂ ಹುಬ್ಬಳ್ಳಿ ತಾಲೂಕಿನ ನೂಲ್ವಿ, ಅದರಗುಂಚಿ, ಕುರುಡಿಕೆರೆ ಗ್ರಾಮಗಳಲ್ಲಿ ಮತ್ತು ಕಲಘಟಗಿ ತಾಲೂಕಿನ ನೆಲ್ಲಿಹರವಿ ತಾಂಡಾ, ಬಿ ಹೂಲಿಕಟ್ಟಿ, ದ್ಯಾಮನಕೊಡ ಗ್ರಾಮಗಳಲ್ಲಿ ಪ್ರಸ್ತುತ ಖಾಸಗಿ ಕೊಳವೆ ಭಾವಿಗಳ ಮೂಲಕ ನೀರ ಸರಬರಾಜು ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಗಳು ತಿಳಿಸಿದರು.ಗುಡುಗು, ಸಿಡಿಲು, ಮಿಂಚು ಕುರಿತು ಜಾಗೃತಿ: ಸಿಡಿಲು, ಗುಡುಗು, ಮಿಂಚು ಮತ್ತು ರಬಸದ ಮಳೆಯಿಂದ ರಕ್ಷಿಸಿಕೊಳ್ಳುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ಕರ ಪತ್ರಗಳನ್ನು ವಿತರಿಸಬೇಕು. ಮತ್ತು ಗ್ರಾಮಗಳಲ್ಲಿ ಸ್ಥಳಿಯ ಸಂಸ್ಥೆಗಳು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಗುಡುಗು, ಸಿಡಿಲಿನ ಸಮಯದಲ್ಲಿ ಜನರು ಹೊರಗಡೆ ನಿಲ್ಲದೇ ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆಯಬೇಕು. ಮರಗಳ ಕೆಳಗೆ ನಿಲ್ಲುವುದು, ತೆರೆದ ಮೈದಾನಗಳಲ್ಲಿ ಇರುವುದನ್ನು ತಪ್ಪಿಸಬೇಕು. ವಿದ್ಯುತ್ ಕಂಬಗಳು, ಲೋಹದ ವಸ್ತುಗಳು ಮತ್ತು ನೀರಿನ ಪ್ರದೇಶಗಳಿಂದ ದೂರವಿರುವುದು ಸುರಕ್ಷಿತ ಕ್ರಮವಾಗಿದೆ.ಮನೆಗಳಲ್ಲಿ ಇದ್ದಾಗ ವಿದ್ಯುತ್ ಉಪಕರಣಗಳನ್ನು ಬಳಸದಿರುವುದು, ಮೊಬೈಲ್ ಚಾರ್ಜ್ ಮಾಡುವುದನ್ನು ತಪ್ಪಿಸುವುದು ಮತ್ತು ಕಿಟಕಿಗಳು, ಬಾಗಿಲುಗಳಿಂದ ದೂರವಿರುವುದು ಒಳಿತು. ರೈತರು ತಮ್ಮ ಪಶುಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಕಾಪಾಡಿಕೊಳ್ಳಬೇಕು ಮತ್ತು ಗ್ರಾಮ ಪಂಚಾಯಿತಿಗಳು, ಅಂಗನವಾಡಿ ಮತ್ತು ಶಾಲೆಗಳ ಮೂಲಕ ಸಾರ್ವಜನಿಕ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಶಾಲಾಂ ಹುಸೇನ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಕೆ.ಸಿ.ಭದ್ರಣ್ಣವರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಪಶುಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆ ಉಪ ನಿರ್ದೇಶಕ ಡಾ. ಎಸ್ ವ್ಹಿ. ಸಂತಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಜಗದೀಶ ಪಾಟೀಲ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಂ. ಹೊನಕೇರಿ ಹಾಗೂ ಎಲ್ಲ ತಾಲೂಕುಗಳ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಕಂದಾಯ ನಿರೀಕ್ಷಕರು, ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE